# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 130 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 09–12–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 130 | RNI No: KARKAN/2023/88462 | Chitradurga | Date: 09-12-2024 Monday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ರೂ.3 ಕೋಟಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಗುದ್ದಲಿ ಪೂಜೆ 2

ಸರ್ಕಾರದ ಸೌಲಭ್ಯಗಳು ಫಲಾನುಭವಿಗಳಿಗೆ ತಲುಪಿಸುವ ಕಾರ್ಯದಲ್ಲಿ ಲೋಪ ಸಲ್ಲದು 3

ಸರ್ಕಾರಿ ಶಾಲಾ ಮಕ್ಕಳಿಗೂ ಬಂತು ವಿಮಾನಯಾನ ಭಾಗ್ಯ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

» **ಚಿತ್ರದುರ್ಗ**

2024–25ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಶುಲ್ಕ ಮರುಪಾವತಿ" ಕಾರ್ಯಕ್ರಮಕ್ಕೆ ಹಾಗೂ ಪ್ರವರ್ಗ–1ರ ಅಲೆಮಾರಿ, ಅರೆಅಲೆಮಾರಿ ವಿದ್ಯಾರ್ಥಿಗಳಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆ ಅವಧಿಯನ್ನು ಇದೇ ಡಿ.20 ರವರೆಗೆ ವಿಸ್ತರಿಸಲಾಗಿದೆ. ಜಿಲ್ಲೆಯ ಅರ್ಹ ವಿದ್ಯಾರ್ಥಿಗಳು https://ssp.postmatric.karnataka.gov.in ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ https://bcwd.karnataka.gov.in ವೆಬ್‌ಸೈಟ್ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ಇಲಾಖಾ ಸಹಾಯವಾಣಿ ಸಂಖ್ಯೆ 8050770005 ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಡಿ.09 ರಿಂದ 23 ರವರೆಗೆ ವಿದ್ಯುತ್ ವ್ಯತ್ಯಯ

» **ಚಿತ್ರದುರ್ಗ**

ಕೆಪಿಟಿಸಿಎಲ್ ಬೃಹತ್ ಕಾಮಗಾರಿ ವತಿಯಿಂದ 66 ಕೆ.ವಿ ದಾವಣಗೆರೆ–ಚಿತ್ರದುರ್ಗ ಲೈನ್–1ರ ಟ್ಯಾಪ್ ಪಾಯಿಂಟ್‌ನಿಂದ 2.196 ಕಿಮೀ ಉದ್ದಕ್ಕೂ ಭರಮಸಾಗರ ವಿ.ವಿ ಕೇಂದ್ರಕ್ಕೆ 2.196 ಕಿಮೀ ದೂರದ ನಿರ್ಮಾಣಕ್ಕೆ ಕೊಯೋಟ್ ಕಂಡಕ್ಟರ್‌ನೊಂದಿಗೆ ಜೋಡಿ ಪ್ರಸರಣ ಮಾರ್ಗದ ಮೇಲಿರುವ ಜೋಡಿ ಮಾರ್ಗದಿಂದ ಒಂಟಿ ಪ್ರಸರಣ ಮಾರ್ಗದ ಮೇಲಿರುವ ಒಂಟಿ ಮಾರ್ಗ ಪರಿವರ್ತಿಸುವ ಮೂಲಕ ಅಸ್ತಿತ್ವದಲ್ಲಿರುವ 66/11 ಕೆವಿ ಭರಮಸಾಗರ ವಿ.ವಿ ಕೇಂದ್ರಕ್ಕೆ ಲೀಲೋ ವ್ಯವಸ್ಥೆ ಒದಗಿಸಲು 1 ಸಂಖ್ಯೆಯ 66 ಕೆವಿ ಟಿ.ಬಿಯನ್ನು 66/11 ಕೆ.ವಿ ಭರಮಸಾಗರ ವಿ.ವಿ ಕೇಂದ್ರದಲ್ಲಿ ನಿರ್ಮಾಣ ಕಾರ್ಯಕ್ಕಾಗಿ ಇದೇ ಡಿ.09 ರಿಂದ 23 ರವರೆಗೆ (ಪರ್ಯಾಯ ದಿನಗಳಂದು ಡಿ.09, 11, 13, 15, 17, 19, 21 ಮತ್ತು ಡಿ.23ರಂದು) ಬೆಳಿಗ್ಗೆ 9 ರಿಂದ ಸಂಜೆ 5 ರವರೆಗೆ ಭರಮಸಾಗರ ವಿ.ವಿ ಕೇಂದ್ರದಿಂದ ಸರಬರಾಜಾಗುವ ಎಲ್ಲಾ 11 ಕೆ.ವಿ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ವಿದ್ಯುತ್ ಅಡಚಣೆಯಾಗುವ ಪ್ರದೇಶಗಳು: ಹೆಗ್ಗೆರೆ, ಎಮ್ಮೆಹಟ್ಟಿ, ನಲ್ಲಿಕಟ್ಟೆ, ಕೋಳಾಳ್ ಎನ್.ಜೆ.ವೈ, ಹೆಗ್ಗಡೆಹಾಳ್, ವಿಜಾಪುರ, ಶಿವನಕೆರೆ, ನಂದಿಹಳ್ಳಿ, ಬಹದ್ದೂರ್ ಘಟ್ಟ , ಅಡವಿ ಗೊಲ್ಲರಹಳ್ಳಿ, ಭರಮಸಾಗರ , ಪಮೇರಹಳ್ಳಿ, ಕೋಗುಂಡೆ, ಎಸ್.ಕೆ.ಎಮ್ ಕೈಗಾರಿಕಾ ಪ್ರದೇಶ, ಕೋಡಿಹಳ್ಳಿ, ಅರಳಕಟ್ಟೆ ಮತ್ತು ಸುತ್ತ ಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. –– ಗ್ರಾಹಕರು ಸಹಕರಿಸಬೇಕು ಎಂದು ಬೆಸ್ಕಾಂ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

### ಡಿ.09 ರಿಂದ 18 ರವರೆಗೆ ವಿದ್ಯುತ್ ವ್ಯತ್ಯಯ

» **ಚಿತ್ರದುರ್ಗ**

ಕೆಪಿಟಿಸಿಎಲ್ ಬೃಹತ್ ಕಾಮಗಾರಿ ವತಿಯಿಂದ ಚಿತ್ರದುರ್ಗ 66 ಕೆ.ವಿ ವಿದ್ಯುತ್ ವಿತರಣಾ ಕೇಂದ್ರದಿಂದ ಪಂಡರಹಳ್ಳಿ ವಿ.ವಿ ಕೇಂದ್ರಕ್ಕೆ ವಿದ್ಯುತ್ ಸರಬರಾಜಾಗುವ ಮಾರ್ಗ–3ರ ವಾಹಕ ಬದಲಾವಣೆ ಮತ್ತು ಗೋಪುರಗಳನ್ನು ನಿರ್ಮಾಣ ಮಾಡುವ ಕಾಮಗಾರಿಗೆ ಪಂಡರಹಳ್ಳಿ, ಚಿತ್ರಹಳ್ಳಿ, ಹೆಚ್.ಡಿ.ಪುರ ಮತ್ತು ಹೊಳಲ್ಕೆರೆ 66/11 ಕೆ.ವಿ ವಿ.ವಿ ಕೇಂದ್ರದಿಂದ ಸರಬರಾಜಾಗುವ ಎಲ್ಲಾ 11 ಕೆ.ವಿ ಮಾರ್ಗಗಳಲ್ಲಿ ಮಾರ್ಗ ಮುಕ್ತತೆ ತೆಗೆದುಕೊಳ್ಳುವುದರಿಂದ ಇದೇ ಡಿ.9 ರಿಂದ 18 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ವಿದ್ಯುತ್ ಅಡಚಣೆಯಾಗುವ ಪ್ರದೇಶಗಳು: ಪಂಡರಹಳ್ಳಿ, ಅನ್ನೆಹಾಳು, ಹುಲ್ಲೂರು, ಜಾನುಕೊಂಡ, ಸಿದ್ದಾಪುರ, ಗೋಡಬನಾಳು, ಸೊಂಡೆಕೊಳ, ಸೊಲ್ಲಾಪುರ, ಕುರುಬರಹಳ್ಳಿ, ಬೆಟ್ಟದ ನಾಗೇನಹಳ್ಳಿ, ಹೆಚ್.ಡಿ.ಪುರ, ಟಿ.ನುಲೇನೂರು, ಬೋದಿಪುರ, ತಾಳ್ಯ, ಮತ್ತಿಘಟ್ಟ, ತೆಕಲವಟ್ಟಿ, ಚಿತ್ರಹಳ್ಳಿ, ಬಿ.ಜಿ.ಹಳ್ಳಿ, ಮದ್ದೇರು, ಕೇಶವಪುರ, ಕೊಂಡಾಪುರ, ಹೊಳಲ್ಕೆರೆ, ಚನ್ನಪಟ್ಟಣ, ಹರೇನಹಳ್ಳಿ, ಪುಣಜೂರು, ಎನ್.ಜಿ.ಹಳ್ಳಿ, ಗುಂಡೇರಿ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಗ್ರಾಹಕರು ಸಹಕರಿಸಬೇಕು ಎಂದು ಬೆಸ್ಕಾಂ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಉಪ ಚುನಾವಣೆಯಲ್ಲಿ ಗೆಲುವು: ಕಾಂಗ್ರೆಸ್ ಶಕ್ತಿ ಹೆಚ್ಚಾಗಿದೆ; ಸತೀಶ್

» **ಚಿತ್ರದುರ್ಗ**

ರಾಜ್ಯದ ಮೂರು ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆದ್ದಿರುವುದು ಪಕ್ಷಕ್ಕೆ ಶಕ್ತಿ ಬಂದಂತಾಗಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್‌ಜಾರಕಿಹೊಳಿ ಹರ್ಷ ವ್ಯಕ್ತಪಡಿಸಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಶನಿವಾರ ಭೇಟಿ ನೀಡಿ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ಅವರು ವಿಧಾನಸಭೆ ಉಪ ಚುನಾವಣೆಯಲ್ಲಿ ರಾಜ್ಯದ ಮುಖ್ಯಮಂತ್ರಿ ಉಪ ಮುಖ್ಯಮಂತ್ರಿಗಳ ಶ್ರಮವೆಷ್ಟಿದೆಯೋ ಅಷ್ಟೆ ಕಾರ್ಯಕರ್ತರ ಕೊಡುಗೆಯೂ ಇದೆ. ಮುಂದೆ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆಯಿದೆ. ಅಲ್ಲಿಯೂ ಕಾಂಗ್ರೆಸ್ ಗೆಲ್ಲಬೇಕು. ಚಿತ್ರದುರ್ಗ ಲೋಕಸಭಾ ಚುನಾವಣೆಯಲ್ಲಿ ನಮ್ಮ ಪಕ್ಷಕ್ಕೆ ಸೋಲುಂಟಾಗಿದೆ. ಮುಂದೆ ಸರಿಪಡಿಸಿಕೊಳ್ಳಬೇಕಾಗಿರುವುದರಿಂದ ಕಾರ್ಯಕರ್ತರು ಒಗ್ಗಟ್ಟಿನಿಂದಿದ್ದು, ಪಕ್ಷದ ಕೆಲಸ ಮಾಡಬೇಕೆಂದು ಕರೆ ನೀಡಿದರು.

ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಮಾತನಾಡಿ ಸಚಿವ



ಸತೀಶ್‌ಜಾರಕಿಹೊಳಿರವರ ಆಲೋಚನೆ, ಯೋಜನೆಗಳೆ ವಿಭಿನ್ನವಾಗಿರುತ್ತವೆ. ಯಾವಾಗಲು ಪಕ್ಷ ಸಂಘಟನೆ ಬಗ್ಗೆ ಚಿಂತಿಸುತ್ತಿರುತ್ತಾರೆ. ಶಿಗ್ಗಾವಿ ವಿಧಾನಸಭೆ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆಲುವಿಗೆ ಇವರ ಪಾತ್ರ ಬಹಳಷ್ಟಿದೆ. ಮುಂದೆ ರಾಜ್ಯದ ಚುಕ್ಕಾಣಿ ಹಿಡಿಯುವ ಅವಕಾಶ ಸಿಗಲಿ ಎಂದು ಹಾರೈಸಿದರು.

ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಮಾತನಾಡುತ್ತ ರಾಜ್ಯದ ಮೂರು ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಸಚಿವ ಸತೀಶ್‌ಜಾರಕಿಹೊಳಿರವರ ಪರಿಶ್ರಮವಿದೆ ಎಂದು ಸ್ಮರಿಸಿದರು.ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಕಾರ್ಯಾಧ್ಯಕ್ಷ ಕೆ.ಎಂ.ಹಾಲಸ್ವಾಮಿ, ಉಪಾಧ್ಯಕ್ಷ ಎಸ್.ಎನ್.ರವಿಕುಮಾರ್, ಪ್ರಧಾನ ಕಾರ್ಯದರ್ಶಿಗಳಾದ ಕೆ.ಪಿ.ಸಂಪತ್‌ಕುಮಾರ್, ಡಿ.ಎನ್.ಮೈಲಾರಪ್ಪ, ದ್ರಾಕ್ಷಾ ರಸ ಮಂಡಳಿ ಅಧ್ಯಕ್ಷ ಬಿ.ಯೋಗೇಶ್‌ಬಾಬು, ಪರಿಶಿಷ್ಟ ಜಾತಿ ವಿಭಾಗದ ಅಧ್ಯಕ್ಷ ಮಂಜುನಾಥ್, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಶಶಿಕಲಾ, ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಆರ್.ಕೆ.ಸರ್ದಾರ್, ಹೆಚ್.ಅಂಜಿನಪ್ಪ,

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಆರ್.ನರಸಿಂಹರಾಜ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಗೀತನಂದಿನಿಗೌಡ, ಕೆ.ಪಿ.ಸಿ.ಸಿ.ಕೋಆರ್ಡಿನೇಟರ್ ಜಿ.ಎಸ್.ಕುಮಾರ್‌ಗೌಡ, ಅಲ್ಪಸಂಖ್ಯಾತ ವಿಭಾಗದ ಅಧ್ಯಕ್ಷ ಸೈಯದ್ ಖುದ್ದೂಸ್, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಎನ್.ಡಿ.ಕುಮಾರ್, ನಗರಸಭೆ ಸದಸ್ಯ ನರಸಿಂಹಮೂರ್ತಿ, ನಾಮನಿರ್ದೇಶಕ ಸದಸ್ಯ ಟಿ.ನರಸಿಂಹಮೂರ್ತಿ, ಗ್ಯಾರೆಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಆರ್.ಶಿವಣ್ಣ ವೇದಿಕೆಯಲ್ಲಿದ್ದರು.

## ರಾಜನಹಳ್ಳಿ ವಾಲ್ಮೀಕಿ ಗುರುಪೀಠದಲ್ಲಿ 7ನೇ ವರ್ಷದ ವಾಲ್ಮೀಕಿ ಜಾತ್ರೆ

# ಭಕ್ತರ ಸಹಕಾರಕೋರಿದ ಪ್ರಸನ್ನಾನಂದಸ್ವಾಮೀಜಿ

» **ಚಳ್ಳಕೆರೆ**

ಪ್ರತಿವರ್ಷದಂತೆ ಈ ವರ್ಷವೂ ದಾವಣಗೆರೆ ಜಿಲ್ಲೆ ರಾಜನಹಳ್ಳಿಯಲ್ಲಿ ಮಹರ್ಷಿ ಶ್ರೀವಾಲ್ಮೀಕಿ ಪೀಠದಲ್ಲಿ ಏಳನೇ ವರ್ಷದ ವಾಲ್ಮೀಕಿ ಜಾತ್ರೆಯನ್ನು ಸಂಭ್ರಮ, ಸಡಗರಗಳಿಂದ ನಡೆಸಲು ನಿರ್ಧರಿಸಿದ್ದು, ಸಮುದಾಯದ ಮುಖಂಡರು ಜಾತ್ರೆಯ ಯಶಸ್ವಿಗೆ ಕೈಜೋಡಿಸುವಂತೆ ಪ್ರಸನ್ನಾನಂದಪುರಿಸ್ವಾಮೀಜಿ ತಿಳಿಸಿದರು.

ಅವರು, ನಗರದ ವಾಲ್ಮೀಕಿ ಕಲ್ಯಾಣಮಂಟಪದಲ್ಲಿ 2025ರ ಫೆ.8 ಮತ್ತು 9 ಎರಡು ದಿನಗಳ ಕಾಲ ನಡೆಯುವ ವಾಲ್ಮೀಕಿಯ ಜಾತ್ರೆಯ ಬಿತ್ತಿಪತ್ರವನ್ನು ಬಿಡುಗಡೆಗೊಳಿಸಿ ಮಾತನಾಡಿದರು. ಕರ್ನಾಟಕವೂ ಸೇರಿದಂತೆ ನಾಡಿನ ವಿವಿಧಡೆಗಳಿಂದ ಭಕ್ತರು ಸಾಗರೋಪಾದಿಯಲ್ಲಿ ಶ್ರೀವಾಲ್ಮೀಕಿ ಜಾತ್ರೆಗೆ ಆಗಮಿಸುತ್ತಾರೆ. ಬರುವ ಎಲ್ಲಾ ಭಕ್ತರಿಗೆ ಸೂಕ್ತ



ಸೌಲಭ್ಯಗಳನ್ನು ಮಠದ ವತಿಯಿಂದ ಭಕ್ತರ ಸಹಕಾರದಿಂದ ನೀಡಬೇಕಾಗುತ್ತದೆ. ಈಗಾಗಲೇ ಜಾತ್ರೆ ಹಿನ್ನೆಲೆಯಲ್ಲಿ ರಾಜ್ಯದ ವಿವಿದೆಡೆ ಪ್ರವಾಸಕ್ಕೆಗೊಂಡು ವಾಲ್ಮೀಕಿ ಸಮುದಾಯವನ್ನು ಜಾಗ್ರತಗೊಳಿಸಲಾಗಿದೆಎಂದರು.ಸಮುದಾಯದ ಮುಖಂಡ ಟಿ.ತಿಪ್ಪೇಸ್ವಾಮಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿ, ಪೂಜ್ಯ ಶ್ರೀಗಳಿಂದ ಪ್ರತಿವರ್ಷವೂ ಜಾತ್ರೆ ಅದ್ದೂರಿಯಾಗಿ ನಡೆಯುತ್ತಾ ಬಂದಿದೆ. ಜಾತ್ರೆಯ ಯಶಸ್ವಿಗೆ ಶಾಸಕರು ಹಲವಾರು ಸೂಚನೆ ನೀಡಿದ್ದಾರೆ. ಜಾತ್ರೆಯನ್ನು ಸಂಭ್ರಮ ದಿಂದ ನಡೆಸಲು ನಮ್ಮ ಸಹಕಾರ ಎಂದಿನಂತೆ ಮುಂದುವರೆಯುತ್ತದೆ ಎಂದರು.


ಪುಟ ↘ 2


# ಪಿಡಿಒ ಕನ್ನಡ ಭಾಷಾ ಪರೀಕ್ಷೆ: 5122 ಅಭ್ಯರ್ಥಿಗಳು ಗೈರು

» **ಚಿತ್ರದುರ್ಗ**

ಕರ್ನಾಟಕ ಲೋಕಸೇವಾ ಆಯೋಗದ ವತಿಯಿಂದ ಶನಿವಾರ ಜಿಲ್ಲೆಯಲ್ಲಿ ಜರುಗಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ನೇಮಕಾತಿಗೆ ನಡೆದ ಕನ್ನಡ ಭಾಷಾ ಪರೀಕ್ಷೆಗೆ 5122 ಅಭ್ಯರ್ಥಿಗಳು ಗೈರಾಗಿದ್ದಾರೆ. ಕನ್ನಡ ಭಾಷಾ ಪರೀಕ್ಷೆಯು ಚಿತ್ರದುರ್ಗ ನಗರದ 28 ಕೇಂದ್ರಗಳಲ್ಲಿ ಹಾಗೂ ಚಳ್ಳಕೆರೆ ನಗರದ 01 ಕೇಂದ್ರ ಸೇರಿದಂತೆ ಒಟ್ಟು 29 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಿತು. ಜಿಲ್ಲೆಯಲ್ಲಿ ಒಟ್ಟು 10632 ಅಭ್ಯರ್ಥಿಗಳು ಪರೀಕ್ಷೆಗೆ ನೋಂದಣಿ ಮಾಡಿಕೊಂಡಿದ್ದರು. ಇದರಲ್ಲಿ 5510 ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 5122 ಅಭ್ಯರ್ಥಿಗಳು ಪರೀಕ್ಷೆಗೆ ಗೈರಾಗಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ. ಪರೀಕ್ಷಾ ಕೇಂದ್ರಗಳಿಗೆ ಎಸಿ ಭೇಟಿ: ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಅವರು ಚಿತ್ರದುರ್ಗ ನಗರದ ವಿವಿಧ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು.



## ಪ್ರಮುಖ ಸುದ್ದಿ

### ಡಿ.09ರಿಂದ 19 ವರ್ಷದೊಳಗಿನ ಮಕ್ಕಳಿಗೆ ಉಚಿತ ಜಂತುಹುಳು ನಿವಾರಣಾ ಮಾತ್ರೆ ವಿತರಣೆ

# ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮ

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕಿನ 1 ರಿಂದ 19 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಜಂತು ನಿವಾರಕ ಮಾತ್ರೆಯನ್ನು ತಪ್ಪದೇ ನುಂಗಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಚಿತ್ರದುರ್ಗ ತಾಲ್ಲೂಕು ಗ್ರೇಡ್–2 ತಹಶೀಲ್ದಾರ್ ಕೆ.ಎಚ್.ನಾಗರಾಜ್ ಹೇಳಿದರು.

ನಗರದ ತಾಲ್ಲೂಕು ಕಚೇರಿಯಲ್ಲಿ ಶನಿವಾರ ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮದ ತಾಲ್ಲೂಕು ಚಾಲನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮದ ಯಶಸ್ವಿಗೆ ಸಂಬಂಧಿಸಿದ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಗ್ರಾಮೀಣ ಅಭಿವೃದ್ಧಿ ಪಂಚಾಯತ್ ರಾಜ್ ಇಲಾಖೆ ಮುಖ್ಯಸ್ಥರು ಆರೋಗ್ಯ ಇಲಾಖೆಯೊಂದಿಗೆ ಸಹಕರಿಸಿ ಶೇ.100ರಷ್ಟು ಗುರಿ ಸಾಧಿಸಿ ಎಂದರು.

ತಾಲ್ಲೂಕು ಆರೋಗ್ಯಧಿಕಾರಿ ಡಾ.ಬಿ.ವಿ.ಗಿರೀಶ್ ಮಾತನಾಡಿ,



ಇದೇ ಡಿ.09ರಂದು ಜಂತು ನಿವಾರಕ ಮಾತ್ರೆಯನ್ನು ತಾಲ್ಲೂಕಿನದ್ಯಂತ ಎಲ್ಲಾ ಅಂಗನವಾಡಿ ಕೇಂದ್ರಗಳಲ್ಲಿ ಮತ್ತು ಶಾಲೆಗಳಲ್ಲಿ, ಸರ್ಕಾರಿ ಆಸ್ಪತ್ರೆಗಳಲ್ಲಿ ಮಕ್ಕಳಿಗೆ ನುಂಗಿಸಲಾಗುತ್ತದೆ. ಈ ದಿನಗಳಂದು ಪೋಷಕರು ತಮ್ಮ ಮಕ್ಕಳನ್ನು ಶಾಲೆಗೆ ಅಂಗನವಾಡಿಗೆ ಗೈರು ಹಾಜರಾಗದಂತೆ ನೋಡಿಕೊಳ್ಳಬೇಕು. ಒಂದು ವೇಳೆ ಕಾರಣಾಂತರಗಳಿಂದ ಆ ದಿನದಂದು ತಪ್ಪಿ ಹೋದ ಮಕ್ಕಳಿಗೆ ಡಿ.16ರಂದು ಮಾಪ್ ಅಪ್ ರೌಂಡ್ ನಡೆಸಲಾಗುತ್ತದೆ. ಮನೆ ಮನೆಗೆ ಭೇಟಿ ನೀಡಿ, ತಪ್ಪಿ ಹೋದ ಎಲ್ಲ ಮಕ್ಕಳಿಗೂ ಜಂತು ನಿವಾರಕ ಮಾತ್ರೆಯನ್ನು ನುಂಗಿಸಲಾಗುತ್ತದೆ ಎಂದರು.ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ತಾಲೂಕಿನಲ್ಲಿ ಒಟ್ಟು 530 ಅಂಗನವಾಡಿಗಳು, 516 ಸರ್ಕಾರಿ ಖಾಸಗಿ ಶಾಲೆಗಳು, 125 ಐಟಿಐ, ಡಿಪ್ಲೋಮೋ ಕಾಲೇಜುಗಳು 7 ಇದ್ದು, 1 ರಿಂದ 19 ವರ್ಷದ ಮಕ್ಕಳ ಸಂಖ್ಯೆ 113054 ಇರುತ್ತದೆ. ಈ ನಿಟ್ಟಿನಲ್ಲಿ ಎಲ್ಲಾ ಪೂರ್ವ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ವಿವಿಧ ಇಲಾಖೆಗಳ ಮುಖ್ಯಸ್ಥರು ಮೇಲ್ವಿಚಾರಣ ವರದಿಯನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಎಲ್ಲಾ ಅಧಿಕಾರಿಗಳಿಗೂ ಎಪಿಕೆ ಆಪ್ ನೀಡಲಾಗಿದೆ. ಅದರಂತೆ ಮೇಲ್ವಿಚಾರಣ ವರದಿಯನ್ನು ಸಲ್ಲಿಸಲು ತಿಳಿಸಿದರು. ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳಾದ ಸುಧಾ, ಮಂಜುಳಾ, ಹೇಮಾವತಿ, ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದ ವೈದ್ಯಾಧಿಕಾರಿಗಳಾದ ಡಾ.ಮಹೇಂದ್ರ, ಡಾ.ಮಂಜುಳಾ, ಡಾ.ವಾಣಿ ನರ್ಸಿಂಗ್ ಅಧಿಕಾರಿ ಅಕ್ಷತಾ, ಆಶಾ ಬೋಧಕಿ ತಬಿತಾ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ, ಬಿಸಿಎಂ ಅಧಿಕಾರಿ ರಾಜಪ್ಪ, ಹಿರಿಯ ಆರೋಗ್ಯ ಸುರಕ್ಷತಾ ಅಧಿಕಾರಿ ಕಾತ್ಯಾಯನಮ್ಮ ಸೇರಿದಂತೆ ಮತ್ತಿತರರು ಇದ್ದರು.

## ಫಾಸ್ಟ್ ನ್ಯೂಸ್

### ಕನ್ಸಲ್ಟೆಂಟ್ ಇಂಜಿನಿಯರ್‌ಗಳ ಸಭೆ

» ದಾವಣಗೆರೆ

ದಾವಣಗೆರೆ ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಕಟ್ಟಡ ಪರವಾನಿಗೆ ಅರ್ಜಿಗಳನ್ನು ಅಪ್‌ಲೋಡ್ ಮಾಡುವಲ್ಲಿ ಇರುವ ತೊಡಕುಗಳನ್ನು ಸಮಸ್ಯೆಗಳ ಬಗ್ಗೆ ಚರ್ಚಿಸಲು ಡಿಸೆಂಬರ್ 9 ರಂದು ಸಂಜೆ 4 ಗಂಟೆಗೆ ಕನ್ಸಲ್ಟೆಂಟ್ ಇಂಜಿನಿಯರ್‌ಗಳ ಸಭೆಯನ್ನು ಪಾಲಿಕೆ ಕೌನ್ಸಿಲ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

### ರಾಜನಹಳ್ಳಿ ವಾಲ್ಮೀಕಿ ಗುರುಪೀಠದಲ್ಲಿ 7ನೇ ವರ್ಷದ ವಾಲ್ಮೀಕಿ ಜಾತ್ರೆ

» ಮೊದಲ ಪುಟದಿಂದ

ಜಾತ್ರಾ ಸಮಿತಿ ತಾಲ್ಲೂಕು ಅಧ್ಯಕ್ಷರಾಗಿ ಆಯ್ಕೆಯಾದ ವಿಶ್ವಭಾರತಿಪ್ರೌಢಶಾಲಾ ಮುಖ್ಯೋಪಾಧ್ಯಾಯ ಜಿ.ಟಿ.ವೀರಭದ್ರಸ್ವಾಮಿ ಮಾತನಾಡಿ, ಪ್ರತಿವರ್ಷವೂ ಈ ಜಾತ್ರೆಯನ್ನು ನಮ್ಮ ಸಮುದಾಯದ ಸಂಘಟನೆಯ ಜೊತೆಗೆ ಮಹರ್ಷಿ ವಾಲ್ಮೀಕಿಯವರ ವಿಚಾರಧಾರೆಗಳನ್ನು ಹಂಚಿಕೊಳ್ಳಲು ಕಾರ್ಯಕ್ರಮ ಆಯೋಜಿಸಲಾಗುತ್ತದೆ. ತಾಲ್ಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಸಮುದಾಯದ ಭಕ್ತರು ಜಾತ್ರೆಯಲ್ಲಿ ಪಾಲ್ಗೊಳ್ಳುವಂತೆ ವಿನಂತಿಸಲಾಗುವುದು, ತಾಲ್ಲೂಕಿನಾದ್ಯಂತ ತಂಡರಚಿಸಿ ಪ್ರವಾಸಕ್ಕೆ–ಗೊಳ್ಳಲಾಗುವುದು ಎಂದರು. ಮುಖಂಡರಾದ ಬಾಳೆಮಂಡಿರಾಮದಾಸ್, ಕೆ.ಟಿ.ಕುಮಾರಸ್ವಾಮಿ, ಚನ್ನಂಗಿರಂಗಸ್ವಾಮಿ, ದುಗ್ಗಾವರತಿಪ್ಪೇಸ್ವಾಮಿ, ಪಿ.ತಿಪ್ಪೇಸ್ವಾಮಿ, ಡಾ.ಡಿ.ಎನ್. ಮಂಜುನಾಥ, ರಘುನಾಥ, ಸಿ.ಟಿ.ವೀರೇಶ್, ಎಂ.ಚೇತನ್‌ಕುಮಾರ್, ಬಿ.ತಿಪ್ಪೇಸ್ವಾಮಿ, ಸುರೇಶ್, ಬೋರಯ್ಯ, ಬಡಗಿಪಾಪಣ್ಣ, ಶಿವಕುಮಾರ್, ಸಿ.ಗುರುಸ್ವಾಮಿ, ವಿರೂಪಕ್ಷಿ, ಡಿ.ಎಸ್.ಪಾಲಯ್ಯ, ಪುಷ್ಪ, ಸೂರ್ಯಪ್ರಭಾ, ಸೌಭಾಗ್ಯಮ್ಮ, ಜ್ಯೋತಿ ಮುಂತಾದವರು ಭಾಗವಹಿಸಿದ್ದರು.

### ಪರಶುರಾಮಪುರ ಗ್ರಾಪಂ ಅಧ್ಯಕ್ಷ ಸ್ಥಾನಕ್ಕೆ ಡಿ.12ರಂದು ಚುನಾವಣೆ.



» ಚಳ್ಳಕೆರೆ

ತಾಲ್ಲೂಕಿನ ಪರಶುರಾಮಪುರ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಸ್ಥಾನಕ್ಕೆ ಡಿ.12ರ ಗುರುವಾರ ಚುನಾವಣೆ ನಡೆಯಲಿದೆ ಎಂದು ಚುನಾವಣಾಧಿಕಾರಿ, ಬಿಇಒ ಕೆ.ಎಸ್.ಸುರೇಶ್ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ ಡಿ.12ರಂದು ಕೇವಲ ಪರಶುರಾಮಪುರ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಸ್ಥಾನಕ್ಕೆ ಚುನಾವಣಾ ನಿಗದಿಯಾಗಿದ್ದು, ಅಂದು ಬೆಳಗ್ಗೆ 11 ಗಂಟೆಯೊಳಗೆ ಅಧ್ಯಕ್ಷರಾಗ ಬಯಸುವವರು ಫಾರಂ–ನಂ1ರಲ್ಲಿ ಸೂಚಕರ ಸಹಿಯೊಂದಿಗೆ ಚುನಾವಣಾಧಿಕಾರಿಗಳಿಗೆ ತಮ್ಮ ನಾಮಪತ್ರವನ್ನು ನೀಡಬೇಕು. ತಡವಾಗಿ ಬಂದ ನಾಮಪತ್ರಗಳನ್ನು ತಿರಸ್ಕರಿಸಲಾಗುವುದು, ಅಧ್ಯಕ್ಷ ಸ್ಥಾನ ಅನುಸೂಚಿತ ಪಂಗಡಕ್ಕೆ ನಿಗದಿಯಾಗಿದ್ದು, ನಾಮಪತ್ರ ಸಲ್ಲಿಸುವವರು ಜಾತಿ ಸೇರಿದಂತೆ ಎಲ್ಲಾ ದಾಖಲಾತಿಗಳನ್ನು ತಹಶೀಲ್ದಾರ್‌ರಿಂದ ದೃಢೀಕರಿಸಿಕೊಂಡು ನೀಡಬೇಕು.

### ಮಡಿವಾಳಮಾಚಿದೇವರ ಕಾಯಕ ಜನೋತ್ಸವ

» ಚಳ್ಳಕೆರೆ

ಚಿತ್ರದುರ್ಗದ ಮಡಿವಾಳ ಮಾಚಿದೇವ ಪೀಠಾಧ್ಯಕ್ಷರಾದ ಡಾ.ಶ್ರೀಬಸವ ಮಾಚಿದೇವ ಮಹಾಸ್ವಾಮಿಗಳು ಕಾಯಕ ಜನೋತ್ಸವ–2025ನ್ನು 6 ಜನವರಿ 2025ರಂದು ಶ್ರೀಮಠದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.



ಅವರು ಈ ಬಗ್ಗೆ ಪತ್ರಿಕೆಗೆ ಮಾಹಿತಿ ನೀಡಿ, ಮಠದ 16ನೇ ವಾರ್ಷಿಕೋತ್ಸವ, ಸಾಮೂಹಿಕ ಕಲ್ಯಾಣ ಮಹೋತ್ಸವ ಹಾಗೂ ವಧುವರರ ಸಮಾವೇಶ, ಮಡಿವಾಳ ಮಾಚಿದೇವರ ಮೂರ್ತಿ ಹಾಗೂ ವಚನ ಪಲ್ಲಕ್ಕಿ ಉತ್ಸವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಸದ್ಭಕ್ತರು ಹೆಚ್ಚಿನ ಮಾಹಿತಿಗೆ ಮೊ. 99803 40298, 94484 42512, 90601 20306ಗೆ ಸಂಪರ್ಕಿಸಲು ಮನವಿ ಮಾಡಲಾಗಿದೆ.

### ಚುನಾವಣಾ ವೇಳಾಪಟ್ಟಿ

» ದಾವಣಗೆರೆ

ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ತ್ರೈಮಾಸಿಕ ಚುನಾವಣೆ ಪ್ರಕಟಣೆ ಹಾಗೂ ವೇಳಾಪಟ್ಟಿಯನ್ನು ವಿಜ್ಞಾನ ಪರಿಷತ್ತಿನ ಜಾಲತಾಣ www.krvp.in ಹಾಗೂ ಪರಿಷತ್ತಿನ ಕೇಂದ್ರ ಕಚೇರಿ ಸೂಚನ ಫಲಕದಲ್ಲಿ ಪ್ರಕಟಿಸಲಾಗಿರುತ್ತದೆ. ವಿವರಿಗಳಿಗಾಗಿ ಕರಾವಿಪ ಜಾಲತಾಣಕ್ಕೆ ಭೇಟಿ ನೀಡಬೇಕೆಂದು ಮುಖ್ಯ ಚುನಾವಣಾಧಿಕಾರಿ ತಿಳಿಸಿದ್ದಾರೆ.

# ರೂ.3 ಕೋಟಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕರಿಂದ ಗುದ್ದಲಿ ಪೂಜೆ

» ಚಿತ್ರದುರ್ಗ

ಚಿತ್ರದುರ್ಗ ನಗರಸಭೆ ವ್ಯಾಪ್ತಿಯ ವಿವಿಧ ವಾರ್ಡ್‌ಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಹಾಗೂ ನಗರಸಭೆ ಅಧ್ಯಕ್ಷೆ ಬಿ.ಎನ್.ಸುಮಿತಾ ಅವರು ಶನಿವಾರ ಗುದ್ದಲಿಪೂಜೆ ನೆರವೇರಿಸಿದರು.

ಮುಖ್ಯಮಂತ್ರಿಗಳ ವಿಶೇಷ ಅನುದಾನ, 2024–25ನೇ ಸಾಲಿನ ಎಸ್‌ಎಫ್‌ಸಿ ಮುಕ್ತ ನಿಧಿ ಅನುದಾನ ಹಾಗೂ ನಗರಸಭೆ ನಿಧಿಯ ಶೇ.24.10ರ ಅನುದಾನದ ಸೇರಿದಂತೆ ಶನಿವಾರ ಸುಮಾರು ರೂ.3 ಕೋಟಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಯಿತು.



ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ ವಾರ್ಡ್ ನಂ.18ರ ಮೆದೇಹಳ್ಳಿ ರಸ್ತೆ ರಾಷ್ಟ್ರೀಯ ಹೆದ್ದಾರಿ–4ರ ಸರ್ವೀಸ್ ರಸ್ತೆ ಹತ್ತಿರದಲ್ಲಿ ರೂ.30 ಲಕ್ಷ ವೆಚ್ಚದಲ್ಲಿ ಆರ್.ಸಿ.ಸಿ ಡೆಕ್ ಸ್ಲಾಬ್ ನಿರ್ಮಾಣ ಕಾಮಗಾರಿ, ವಾರ್ಡ್ ನಂ.17ರ ಜಯಲಕ್ಷ್ಮೀ ಬಡಾವಣೆ ಶ್ರೀಶಾರಧ ನಿಲಯದಿಂದ ಮಸ್ತಾನ್ ಸಾಬ್ ಮನೆಯವರೆಗೆ ಹಾಗೂ ಪ್ಲೋರ್‌ಮಿಲ್ ಪಕ್ಕದಲ್ಲಿ ರೂ.30 ಲಕ್ಷ ವೆಚ್ಚದಲ್ಲಿ ಸಿ.ಸಿ.ರಸ್ತೆ ನಿರ್ಮಾಣ ಕಾಮಗಾರಿ, ವಾರ್ಡ್ ನಂ.16ರ ಸದಾನಂದಯ್ಯ ಬಡಾವಣೆ ರಂಗಪ್ಪ ಮನೆಯ ಹತ್ತಿರ ಉದ್ಯಾನವನ ನಿರ್ಮಾಣ ಅಭಿವೃದ್ಧಿ ಕಾಮಗಾರಿ, ವಾರ್ಡ್ ನಂ.10ರ ಚೇಳುಗುಡ್ಡ. ಷಣ್ಮುಖ ಮನೆಯಿಂದ ರಂಗಸ್ವಾಮಿ ಮನೆಯವರೆಗೆ ರೂ.30 ಲಕ್ಷ ವೆಚ್ಚದಲ್ಲಿ ಸಿ.ಸಿ.ರಸ್ತೆ ನಿರ್ಮಾಣ, ವಾರ್ಡ್ ನಂ.13ರ ನೆಹರು ನಗರ 2ನೇ ಕ್ರಾಸ್‌ನಲ್ಲಿ ಮೇಷ್ಟ್ರು ಅಂಗಡಿ ನಾಗಪ್ಪ ಮತ್ತು ಕುಮಾರಣ್ಣನ ಮನೆಗಳ ಕ್ರಾಸ್‌ಗಳಲ್ಲಿ ರೂ.30 ಲಕ್ಷ ವೆಚ್ಚದಲ್ಲಿ ಸಿ.ಸಿ.ರಸ್ತೆಸ ನಿರ್ಮಾಣ ಮತ್ತು ನೆಹರು ನಗರ 2 ಮತ್ತು 3ನೇ ಕ್ರಾಸ್‌ನಲ್ಲಿ ಪೈಪ್‌ಲೈನ್ ಕಾಮಗಾರಿ, ವಾರ್ಡ್ ನಂ.15ರ ಸಂಪಿಗೆ ಸ್ಕೂಲ್ ಪಕ್ಕದ ಮತ್ತು ಬರಗೇರಿ ಬೀದಿ ಗಲ್ಲಿಗಳಲ್ಲಿ ರೂ.30 ಲಕ್ಷ ವೆಚ್ಚದ ಸಿ.ಸಿ.ರಸ್ತೆ ನಿರ್ಮಾಣ ಕಾಮಗಾರಿ, ವಾರ್ಡ್ ನಂ.26ರ ಬಡಮಕಾನ್ ಕ್ರಾಸ್‌ನಿಂದ ಮಟನ್ ಮಾರ್ಕೆಟ್‌ವರೆಗೆ ರೂ.15 ಲಕ್ಷ ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಹಾಗೂ ಮೂಲಭೂತ ಸೌಕರ್ಯ ಕಲ್ಪಿಸುವ ಕಾಮಗಾರಿ, ವಾರ್ಡ್ ನಂ.21ರ ಜೆ.ಸಿ.ಆರ್. ಬಡಾವಣೆ 5ನೇ ಕ್ರಾಸ್ ಸರ್ವಿಸ್ ರಸ್ತೆ ಚಾಫೆರೆಡ್ಡಿ ಹೋಟೆಲ್‌ನಿಂದ ಕನ್ನಡಪ್ರಭ ಷಣ್ಮುಖಪ್ಪ ಮನೆವರೆಗೆ ಹಾಗೂ 6ನೇ ಕ್ರಾಸ್ ಬಿ.ಟಿ.ವೀರಪ್ಪ ಮನೆ ಮುಂಭಾಗ, 4ನೇ ಕ್ರಾಸ್‌ನಲ್ಲಿ ಅಬಕಾರಿ ಆಫೀಸ್ ಮುಂಭಾಗ, 3ನೇ ಕ್ರಾಸ್ ಶಾಂತಿ ವೈನ್ಸ್‌ರವರ ಮನೆ ಮುಂಭಾಗ ರೂ.15 ಲಕ್ಷ ವೆಚ್ಚದಲ್ಲಿ ಸಿ.ಸಿ ಚರಂಡಿ ನಿರ್ಮಾಣ ಹಾಗೂ ಡೆಕ್ ಸ್ಲಾಬ್ ಕಾಮಗಾರಿ, ವಾರ್ಡ್ ನಂ.28ರ ತುರುವನೂರು ಮುಖ್ಯ ರಸ್ತೆಯ ವಾಸವಿ ಲ್ಯಾಬ್ ಪಕ್ಕದ ಆಡಿಟರ್ ನಾಗಭೂಷಣ್ ಮನೆರವರ ಮನೆ ಮುಂಭಾಗದಲ್ಲಿ ರೂ.30 ಲಕ್ಷ ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಹಾಗೂ ಮೂಲಭೂತ ಸೌಕರ್ಯ ಕಲ್ಪಿಸುವ ಕಾಮಗಾರಿಗೆ ಚಾಲನೆ ನೀಡಿದರು.

2024–25ನೇ ಸಾಲಿನ ಎಸ್‌ಎಫ್‌ಸಿ ಮುಕ್ತ ಅನುದಾನದಲ್ಲಿ ಚಿತ್ರದುರ್ಗ ನಗರದ ಯೂನಿಯನ್ ಪಾರ್ಕ್ ಪಕ್ಕದ ರಸ್ತೆಯಲ್ಲಿ ರೂ.30.95 ಲಕ್ಷ ವೆಚ್ಚದಲ್ಲಿ ದೊಡ್ಡ ಮಳೆ ನೀರು ಚರಂಡಿ ಮತ್ತು ಕಲ್ವರ್ಟ್ ನಿರ್ಮಾಣ ಕಾಮಗಾರಿ ಹಾಗೂ ನಗರಸಭೆ ನಿಧಿಯ ಶೇ.24.10ರ ಅನುದಾನದಲ್ಲಿ ಚಿತ್ರದುರ್ಗ ನಗರದ ಯೂನಿಯನ್ ಪಂಪ್ ಹೌಸ್ ಆವರಣದಲ್ಲಿ ರೂ.22 ಲಕ್ಷ ವೆಚ್ಚದಲ್ಲಿ ಪೌರ ಕಾರ್ಮಿಕರ ವಿಶ್ರಾಂತಿ ಗೃಹ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷರಾದ ಬಿ.ಎನ್.ಸುಮಿತಾ, ಪೌರಾಯುಕ್ತೆ ಎಂ.ರೇಣುಕಾ ಹಾಗೂ ನಗರಸಭೆ ಸದಸ್ಯರಾದ ಗೊಪ್ಪೆ ಮಂಜುನಾಥ್, ವೆಂಕಟೇಶ್, ಅನುರಾಧ ರವಿಕುಮಾರ್, ಸುರೇಶ್, ಭಾಗ್ಯಮ್ಮ, ನರಸಿಂಹಮೂರ್ತಿ, ಚಂದ್ರಮ್ಮ ಸೇರಿದಂತೆ ಮತ್ತಿತರು ಇದ್ದರು.




ಚಳ್ಳಕೆರೆ ಚಿಗುರು ಈ–ಕಿಡ್ಸ್ ಪ್ರೀಸ್ಕೂಲ್‌ನಲ್ಲಿ ಶನಿವಾರ ಹಣ್ಣುಗಳ ದಿನಾಚರಣೆ ನಡೆಸಿದರು. ಪುಟಾಣಿ ಮಕ್ಕಳು ವಿವಿಧ ಹಣ್ಣಿನ ವೇಷದಲ್ಲಿ ಕಾಣಿಸಿಕೊಂಡರು. ಕಾರ್ಯದರ್ಶಿ ಶಶಿಕುಮಾರ್, ಸ್ಪೂರ್ತಿ, ಪುಷ್ಪಹರೀಶ್, ಲಕ್ಷ್ಮಿ ಇದ್ದರು.



ಕರ್ನಾಟಕ ರಾಜ್ಯ ವೈನ್ ಮತ್ತು ದ್ರಾಕ್ಷಿ ಬೋರ್ಡ್ ಅಧ್ಯಕ್ಷ ಡಾ.ಬಿ.ಯೋಗೇಶ್‌ಬಾಬು ನವದೆಹಲಿಯಲ್ಲಿ ಅಖಿಲಭಾರತ ಯುವ ಕಾಂಗ್ರೆಸ್ ಅಧ್ಯಕ್ಷ ಉದಯ್‌ಬಾನುಚಿಬ್‌ರವನ್ನು ಭೇಟಿಮಾಡಿ ಸನ್ಮಾನಿಸಿದರು.

## ನಗರದ 10 ಪರೀಕ್ಷಾ ಕೇಂದ್ರಗಳಲ್ಲಿ ಯಶಸ್ವಿಯಾಗಿ ನಡೆದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪರೀಕ್ಷೆ

» ಚಳ್ಳಕೆರೆ

ನಗರದ 10 ಪರೀಕ್ಷಾ ಕೇಂದ್ರಗಳಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಯಿತು. ಪರೀಕ್ಷೆಯ ಮೇಲುಸ್ತುವಾರಿ ಅಧಿಕಾರಿಯಾಗಿ ಕಾರ್ಯನಿರ್ವಹಿಸಿ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಈ ಬಗ್ಗೆ ಮಾಹಿತಿ ನೀಡಿ, ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲೂ ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಲಾಗಿತ್ತು. ನಗರದ ಆದರ್ಶ ವಿದ್ಯಾಲಯ, ಜಯಣ್ಣ ಶಿಕ್ಷಣ ಮಹಾವಿದ್ಯಾಲಯ, ಸ್ವಾಮಿವಿವೇಕಾನಂದ ಪ್ರೌಢಶಾಲೆ, ಹೆಗ್ಗೆರೆ ತಾಯಮ್ಮ ಸರ್ಕಾರಿ ಬಾಲಕಿಯರ ಪ್ರೌಢಶಾಲೆ, ಬಿಎಂಜಿಎಚ್ ಪ್ರೌಢಶಾಲೆ, ಸರ್ಕಾರಿ ಪದವಿಪೂರ್ವ ಕಾಲೇಜು, ಬಾಪೂಜಿ ಪದವಿಪೂರ್ವ ಕಾಲೇಜು, ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ವಾಸವಿಪದವಿಪೂರ್ವ ಕಾಲೇಜು, ಕುವೆಂಪು ಪ್ರೌಢಶಾಲೆಗಳಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪರೀಕ್ಷೆ ಸುಸುತ್ರವಾಗಿ ನಡೆದವು. ಬೆಳಗಿನ ಅವಧಿಯಲ್ಲಿ 10ರಿಂದ12 ಮಧ್ಯಾಹ್ನ 2ರಿಂದ4ತನ ಪರೀಕ್ಷೆಗಳು ನಡೆದವು.





ಅಹಮದ್ ಪ್ಯಾಲೇಸ್‌ನಲ್ಲಿ ನಡೆದ ಉರ್ದು ದಿನಾಚರಣೆಯನ್ನು ಎಂ.ಕೆ.ತಾಜ್‌ಪೀರ್ ಉದ್ಘಾಟಿಸಿದರು.

## ಪ್ರಮುಖ ಸುದ್ದಿ

# ಚಂದ್ರಪ್ಪನರಿಂದ ವಿಕಲಚೇತನರಿಗೆ ತ್ರಿಚಕ್ರ ವಾಹನ ವಿತರಣೆ



» ಹೊಳಲ್ಕೆರೆ

ವಿಕಲಚೇತನರು ಕೀಳರಿಮೆ ತೊರೆದು ಸಮಾಜದ ಮುಖ್ಯ ವಾಹಿನಿಗೆ ಬರಲಿ ಎನ್ನುವ ಉದ್ದೇಶದಿಂದ ಸರ್ಕಾರ ಹಲವಾರು ಸಲಕರಣೆಗಳನ್ನು ನೀಡುತ್ತಿದೆ. ಎಲ್ಲವನ್ನು ಸದ್ಬಳಕೆ ಮಾಡಿಕೊಂಡು ಸ್ವಾವಲಂಭಿಗಳಾಗಿ ಬದುಕಿ ಎಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಅಂಗವಿಕಲರಿಗೆ ಕರೆ ನೀಡಿದರು.ಪಟ್ಟಣದ ಉರ್ದು ಶಾಲೆ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಸಲಕರಣೆಗಳ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಾಮಾನ್ಯರಿಗಿಂತ ವಿಕಲಚೇತನರಿಗೆ ಹೆಚ್ಚಿನ ಬುದ್ದಿಶಕ್ತಿ, ಜ್ಞಾನರ್ಜಾನೆಯಿರುತ್ತದೆ. ಹಾಗಾಗಿ ಜೀವನದಲ್ಲಿ ಮುಂದೆ ಬರುವ ಪ್ರಯತ್ನ ಮಾಡುತ್ತಿರುತ್ತಾರೆ. ಸರ್ಕಾರ ಅಂಗವಿಕಲರಲ್ಲಿ ಆತ್ಮಸ್ಥೈರ್ಯ ತುಂಬುವುದಕ್ಕಾಗಿ ಒಂದು ಕೋಟಿ 90 ಲಕ್ಷ ರೂ.ಗಳ ವೆಚ್ಚದಲ್ಲಿ ಲ್ಯಾಪ್‌ಟಾಪ್, ತ್ರಿಚಕ್ರ ವಾಹನ, ಬ್ಯಾಟರಿ ಚಾಲಿತ ವೀಲ್‌ಚೇರ್‌ಗಳನ್ನು ನೀಡಿದೆ. 180 ವಿಕಲಚೇತನರಿಗೆ ಗಂಗಾ ಕಲ್ಯಾಣ ಯೋಜನೆಯಡಿ ಬೋರ್‌ವೆಲ್ ಕೊರೆಸಿ ಮೋಟಾರ್ ಕೊಡುವ ಕೆಲಸವಾಗುತ್ತಿದೆ. ಎಸ್ಸಿ. ಕಾರ್ಪೊರೇಷನ್‌ನಿಂದ 200 ಕ್ಕೂ ಹೆಚ್ಚು ಪರಿಶಿಷ್ಟ ಜಾತಿಯ ವಿಕಲಚೇತನರಿಗೆ ಕೊಳವೆ ಬಾವಿಗಳನ್ನು ಮಂಜೂರು ಮಾಡಲಾಗಿದೆ. ಸರ್ಕಾರ ನಿಮಗೆ ನೀಡುವ ಸಲಕರಣೆಗಳು ದುರುಪಯೋಗವಾಗಬಾರದು. ನೀವುಗಳೇ ಬಳಸಿಕೊಳ್ಳಿ ಎಂದು ತಿಳಿಸಿದರು. ಹೊಳಲ್ಕೆರೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ವಿಶ್ವನಾಥ್, ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ವೈಶಾಲಿ, ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ತಾಲ್ಲೂಕು ಅಧಿಕಾರಿ ದೇವರಾಜ ಈ ಸಂದರ್ಭದಲ್ಲಿ ಹಾಜರಿದ್ದರು.

## ಭರಮಸಾಗರ ಸರ್ಕಾರಿ ಕಾಲೇಜಿನಲ್ಲಿ ಪಠ್ಯೇತರ ಚಟುವಟಿಕೆಗೆ ಚಾಲನೆ



» ಹೊಳಲ್ಕೆರೆ

ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಬೇಕೆಂಬ ಉದ್ದೇಶದಿಂದ ಅತ್ಯುತ್ತಮ ಶಾಲಾ–ಕಾಲೇಜು, ಹಾಸ್ಟೆಲ್‌ಗಳನ್ನು ತೆರೆಯಲಾಗಿದೆ ಎಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.ಭರಮಸಾಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದ್ದ ಪಠ್ಯೇತರ ಚಟುವಟಿಕೆಗಳು ಹಾಗೂ ಪ್ರಥಮ ವರ್ಷದ ಪದವಿ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಉದ್ಘಾಟಿಸಿ ಮಾತನಾಡಿದರು. ಶಿಕ್ಷಣದಿಂದ ಮಾತ್ರ ಸಾಮಾಜಿಕ, ಆರ್ಥಿಕವಾಗಿ ಬಲಶಾಲಿಗಳಾಬಹುದು. ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆಯಾಗಬಾರದೆಂದು ಹಾಸ್ಟೆಲ್‌ಗಳನ್ನು ಕಟ್ಟಲಾಗಿದೆ. ಮೂಲ ಸೌಲಭ್ಯಗಳ ಜೊತೆಗೆ ನುರಿತ ಶಿಕ್ಷಕರಗಳಿದ್ದಾರೆ. ಸರ್ಕಾರ ಶಿಕ್ಷಣಕ್ಕಾಗಿ ಎಲ್ಲಾ ರೀತಿಯ ನೆರವು ನೀಡುತ್ತಿದೆ ಎಂದು ಹೇಳಿದರು.

## ಫಾಸ್ಟ್ ನ್ಯೂಸ್

### ಪ್ರಬಂಧ ಸ್ಪರ್ಧೆ

» ಚಿತ್ರದುರ್ಗ

ಅಖಿಲಭಾರತೀಯವಿದ್ಯಾರ್ಥಿಪರಿಷತ್‌ವತಿಯಿಂದ ಭಾರತ ರತ್ನ ಸಂವಿದಾನ ಶಿಲ್ಪಿ ಡಾ. ಬಿ. ಆರ್. ಅಂಬೇಡ್ಕರ್ ಅವರ ಪುಣ್ಯಸ್ಮರಣೆಯ ಪ್ರಯುಕ್ತ ತಾಲೂಕು ಮಟ್ಟದ ಪ್ರಬಂಧ ಸ್ಪರ್ಧೆಯನ್ನು ಹಮ್ಮಿಕೊಂಡಿದೆ. ಸಮಕಾಲಿನ ಭಾರತದಲ್ಲಿ ಡಾ. ಬಿ. ಆರ್.ಅಂಬೇಡ್ಕರ್ ರವರ ಚಿಂತನೆ ಪ್ರಸ್ತುತತೆಯ ಬಗ್ಗೆ ಪ್ರಬಂಧ ಸ್ಪರ್ದೆಯನ್ನು ನಡೆಸಲಾಗುತ್ತಿದೆ. ಪದವಿ ಮಟ್ಟದ ವಿದ್ಯಾರ್ಥಿಗಳು ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಬಹುದು.ಕನ್ನಡ ಭಾಷೆಯಲ್ಲಿ ಪ್ರಬಂಧವನ್ನು ಸ್ವಹಸ್ತಕಾರದಲ್ಲಿ ಬರೆಯಬೇಕು. ಬರೆದಂತಹ ಪ್ರಬಂಧವನ್ನು ಹಾಗೂ ಕಾಲೇಜು ಪ್ರಾಂಶು ಪಾಲರಿಂದ ಅಥವಾ ವಿಭಾಗ ಮುಖ್ಯಸ್ಥರಿಂದ ದೃಢೀಕರಿಸಲ್ಪಟ್ಟ ವ್ಯಾಸಂಗ ಪ್ರಮಾಣ ಪಾತ್ರವನ್ನು ಕಡ್ಡಾಯವಾಗಿ ಜೊತೆಗಿರಿಸಬೇಕು. ಬರೆದ ಪ್ರಬಂಧವನ್ನು ಎಬಿವಿಪಿ ಕಾರ್ಯಾಲಯ, ಎಸ್. ಪಿ ಕಛೇರಿ ಎದುರು, ಪ್ರಸನ್ನ ಗಣಪತಿ ದೇವಸ್ಥಾನ ಹಿಂಭಾಗ, ಕೆಳಗೋಟೆ, ಚಿತ್ರದುರ್ಗ-577 501 ಇಲ್ಲಿಗೆ ತಲುಪಿಸಲು ಕೋರಲಾಗಿದೆ. 13-12-2024ರ ಸಂಜೆ 5:00 ಗಂಟೆಯೊಳಗೆ ತಲುಪುವಂತೆ ಕಳುಹಿಸಬೇಕು. ಪ್ರಬಂಧದಲ್ಲಿ ನಿಮ್ಮ ಹೆಸರು ಮತ್ತು ಮೊಬೈಲ್ ಸಂಖ್ಯೆಯಲ್ಲಿ ನಮೂದಿಸಬೇಕು. ಈ ಪ್ರಬಂಧ ಸ್ಪರ್ದೆಯಲ್ಲಿ ವಿಜೇತರಾದವರಿಗೆ ಪ್ರಥಮ ಬಹುಮಾನ : 1000 ದ್ವಿತೀಯ ಬಹುಮಾನ : 700 ತೃತೀಯ ಬಹುಮಾನ : 500 ರೂ. ಗಳನ್ನು ನೀಡಲಾಗುವುದು ಹೆಚ್ಚಿನ ಮಾಹಿತಿಗಾಗಿ 7337669656/ 9986561295/ 63630 44610/ 84318 32708 ದೂರವಾಣಿಯನ್ನು ಸಂಪರ್ಕ ಮಾಡಬಹುದಾಗಿದೆ

### ಉಡುಸಾಲಪ್ಪ ನಿಧನ

» ಚಿತ್ರದುರ್ಗ

ನಿವೃತ್ತ ಎ.ಎಸ್.ಐ. ಕೆ.ಹೆಚ್.ಉಡುಸಾಲಪ್ಪ(75) ಭಾನುವಾರ ನಗರದ ಮುನ್ಸಿಪಲ್ ಕಾಲೋನಿಯಲ್ಲಿರುವ ನಿವಾಸದಲ್ಲಿ ನಿಧನರಾದರು. ಅನಾರೋಗ್ಯದಿಂದ ಬಳಲುತ್ತಿದ್ದ ಅವರು ಚಿಕಿತ್ಸೆ ಫಲಿಸದೆ ಕೊನೆಯುಸಿರೆಳೆದರು. ಮೃತರು ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಜೋಗಿಮಟ್ಟಿ ರಸ್ತೆಯಲ್ಲಿರುವ ರುದ್ರಭೂಮಿಯಲ್ಲಿ ಮೃತರ ಅಂತ್ಯಕ್ರಿಯೆ ಭಾನುವಾರ ನಡೆಯಿತೆಂದು ಕುಟುಂಬದವರು ತಿಳಿಸಿದ್ದಾರೆ.

### ಪಖ್ವಾಡ ಶಿಬಿರ

» ದಾವಣಗೆರೆ

ಬೀದಿ ಬದಿ ವ್ಯಾಪಾರಸ್ಥರ ಸರ್ವತೋಮುಖ ಅಭ್ಯುದಯಕ್ಕಾಗಿ ಕೇಂದ್ರ ಪುರಸ್ಕೃತ ಪಿಎಂ ಸ್ವ-ನಿಧಿ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಸಾಲ ಮಂಜೂರಾತಿ ಮಾಡುವುದು, ಸಾಲ ವಿತರಣೆ ಮಾಡುವುದು ಹಾಗೂ ಸಾಮಾಜಿಕ ಭದ್ರತಾ ವಿಮಾ ಯೋಜನೆಗಳನ್ನು ಒದಗಿಸುವ ಸಂಬಂಧ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಈ ಯೋಜನೆಯ ವೇಗವನ್ನು ಹೆಚ್ಚಿಸಲು ಡಿಸೆಂಬರ್ 9 ರವರೆಗೆ ಪಖ್ವಾಡ ಶಿಬಿರಗಳನ್ನು ವಿವಿಧ ಬ್ಯಾಂಕುಗಳ ಎಲ್ಲಾ ಶಾಖೆಗಳಲ್ಲಿ ಆಯೋಜಿಸಲಾಗಿದೆ ಎಂದು ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

### ಕ್ರೀಡಾಪಟುಗಳಿಗೆ ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನ ಪರಿಶಿಷ್ಟ ಜಾತಿ ಉಪಯೋಜನೆ ಹಾಗೂ ಪರಿಶಿಷ್ಟ ಪಂಗಡ ಉಪಯೋಜನೆ ಅಡಿಯಲ್ಲಿ 2023ನೇ ಕ್ಯಾಲೆಂಡರ್ ವರ್ಷದಲ್ಲಿ ಅಂತರರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ನಿಗಧಿತ ನಮೂನೆಯಲ್ಲಿ ಭರ್ತಿ ಮಾಡಿ ಅರ್ಜಿಗಳನ್ನು ಡಿಸೆಂಬರ್ 20ರೊಳಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ದಾವಣಗೆರೆ ಇಲ್ಲಿಗೆ ಸಲ್ಲಿಸಬೇಕು. ಹೆಚ್ಚಿನ ವಿವರಗಳಿಗೆ 08192-237480 ಸಂಪರ್ಕಿಸಿ.

### ಆಯ್ಕೆ ಸಮಿತಿ ಸಭೆ

» ದಾವಣಗೆರೆ

ಪ್ರಸಕ್ತಸಾಲಿನವಿವಿಧನಿಗಮಗಳಫಲಾನುಭವಿಗಳನ್ನು ಆಯ್ಕೆ ಮಾಡಲು ಆಯ್ಕೆ ಸಮಿತಿ ಸಭೆಯನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಸುರೇಶ್.ಬಿ.ಇಟ್ನಾಳ್‌ಅಧ್ಯಕ್ಷತೆಯಲ್ಲಿಡಿ.12 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

### ಉಚಿತ ಪರೀಕ್ಷಾ ಪೂರ್ವ ತರಬೇತಿ

» ದಾವಣಗೆರೆ

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ದಾವಣಗೆರೆ ವತಿಯಿಂದ ಕರ್ನಾಟಕ ಲೋಕಸೇವಾ ಆಯೋಗ ಇವರು ನಡೆಸುವ ಕೆ.ಎ.ಎಸ್. ಹುದ್ದೆಗಾಗಿ ಸ್ಪರ್ಧಾತ್ಮಕ ಪರೀಕ್ಷೆ ಬರೆಯಲಿರುವ ಪರೀಕ್ಷಾರ್ಥಿಗಳಿಗೆ ಡಿ.9 ರಿಂದ 19 ರವರೆಗೆ ಉಚಿತ ಪರೀಕ್ಷಾಪೂರ್ವ ತರಬೇತಿಯನ್ನು ಗಾಂಧಿ ಭವನ, ಡಿ.ಹೆಚ್.ಓ ಕಚೇರಿ ಪಕ್ಕ, ಎಸ್.ಓ.ಜಿ. ಕಾಲೋನಿ, ಶ್ರೀ ರಾಮ ನಗರ ರಸ್ತೆ ದಾವಣಗೆರೆ ಇಲ್ಲಿ ಆಯೋಜಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ.ಸಂ: 7406323294 ಸಂಪರ್ಕಿಸಲು ಜಿಲ್ಲಾ ಉದ್ಯೋಗಾಧಿಕಾರಿ ರವೀಂದ್ರ.ಡಿ. ತಿಳಿಸಿದ್ದಾರೆ.

# ಸರ್ಕಾರದ ಸೌಲಭ್ಯಗಳು ಫಲಾನುಭವಿಗಳಿಗೆ ತಲುಪಿಸುವ ಕಾರ್ಯದಲ್ಲಿ ಲೋಪ ಸಲ್ಲದು: ಶಾಸಕ ಟಿ.ರಘುಮೂರ್ತಿ

» ಚಳ್ಳಕೆರೆ



ರಾಜ್ಯ ಸರ್ಕಾರ ಪ್ರತಿಯೊಂದು ಯೋಜನೆ ಅನುಷ್ಠಾನಗೊಳಿಸುವಲ್ಲಿ ಅಧಿಕಾರಿಗಳು ಸೂಕ್ತವಾಗಿ ಕಾರ್ಯನಿರ್ವಹಿಸುತ್ತಿಲ್ಲ. ಮುಂದಿನ ದಿನಗಳಲ್ಲಿ ನಿಮ್ಮ ಕಾರ್ಯವೈಖರಿಯನ್ನು ಬದಲಾಯಿಸಿಕೊಳ್ಳಲೇಬೇಕುಎಂದುಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಶನಿವಾರ ನಗರ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಬಗರ್‌ಹುಕ್ಕುಂ, ನಗರ ಆಶ್ರಯ ಮತ್ತು ಆರಾಧನಾ ಸಮಿತಿಯ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು. ನಗರ ಆಶ್ರಯ ಸಮಿತಿಗೆ ಸಂಬಂಧಿಸಿಂತೆ ಪೌರಾಯುಕ್ತ ಜಗರೆಡ್ಡಿಗೆ ಸೂಚನೆ ನೀಡಿದ ಶಾಸಕರು ನಗರ ಆಶ್ರಯ ಸಮಿತಿ ಸಭೆಯಲ್ಲಿ ಕೈಗೊಳ್ಳುವ ಎಲ್ಲಾ ನಿರ್ಣಯಗಳನ್ನು ಅನುಷ್ಠಾನಗೊಳಿಸುವ ಜವಾಬ್ದಾರಿ ನಿಮ್ಮದ್ದು. ಇದರಲ್ಲಿ ಲೋಪವಾದರೆ ಸಹಿಸುವುದಿಲ್ಲವೆಂದರು. ಪೌರಾಯುಕ್ತ ಜಗರೆಡ್ಡಿ ಮಾಹಿತಿ ನೀಡಿ ವಾಜಿಪೇಯಿ ವಸತಿ ಯೋಜನೆ 71, ಅಂಬೇಡ್ಕರ್ ವಸತಿ ಯೋಜನೆಯಲ್ಲಿ 24 ಅರ್ಜಿಗಳು ಈಗಾಗಲೇ ಎಲ್ಲಾ ದಾಖಲಾತಿಗಳೊಂದಿಗೆ ತಯಾರಿವೆ ಎಂದರು.

ಬಗರ್‌ಹುಕ್ಕುಂ ಸಮಿತಿ ಉದ್ದೇಶಿಸಿ ಮಾತನಾಡಿದ ಶಾಸಕ ಈಗಾಗಲೇ ತುರುವನೂರು ಹೋಬಳಿ ಮಟ್ಟದಲ್ಲಿ 16, ನಗರ ಕಸಬಾದಲ್ಲಿ 15 ಫಲಾನುಭವಿಗಳು ಈಗಾಗಲೇ ಸಮಿತಿಯಿಂದ ಶಿಫಾರಸ್ಸುಗೊಂಡಿದ್ದು ಕೂಡಲೇ ಅವರಿಗೆ ಸಾಗುವಳಿಚೀಟಿನೀಡುವಂತೆಸೂಚಿಸಿದರು. ನಿಯಮಗಳ ಪ್ರಕಾರ ಅರ್ಜಿ ಸಲ್ಲಿಸಿದ್ದರೂ ಕೆಲವೊಂದು ಸಣ್ಣಪುಟ್ಟ ಲೋಪಗಳಿದ್ದರೆ ತಿರಸ್ಕರಿಸುವುದು ಬೇಡ. ಮತ್ತೊಮ್ಮೆ ಪರಿಶೀಲನೆ ನಡೆಸಿ ಸೂಕ್ತ ಫಲಾನುಭವಿ ಗುರುತಿಸಿ ಸೌಲಭ್ಯಕಲ್ಪಿಸಲು ಅಧಿಕಾರಿಗಳು ಮುಂದಾಗಬೇಕು ಎಂದರು.

ಆರಾಧನ ಸಮಿತಿ ಸದಸ್ಯರೊಂದಿಗೆ ಮಾತನಾಡಿದ ಅವರು, 2023-24ನೇ ಸಾಲಿನಲ್ಲಿ ಈಗಾಗಲೇ ಫಲಾನುಫವಿಗಳನ್ನು ಗುರುತಿಸುವ ಕಾರ್ಯ ಮುಕ್ತಾಯಗೊಂಡಿದೆ. ಮತ್ತೊಮ್ಮೆ ಪರಿಶೀಲನೆ ನಡೆಸಿ ಪರಿಹಾರ ಕಲ್ಪಿಸಲಾಗುವುದು ಎಂದರು.

ಸಭೆಯಲ್ಲಿ ತಹಶೀಲ್ದಾರ್ ರೇಹಾನ್‌ಪಾಷ, ಚಿತ್ರದುರ್ಗ ತಹಶೀಲ್ದಾರ್ ನಾಗವೇಣಿ, ನಗರಸಭೆ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಜಾತ, ಸಮುದಾಯ ಅಧಿಕಾರಿ ಭೂತಣ್ಣ, ಲೋಕೋಪಯೋಗಿ ಇಂಜಿನಿಯರ್ ವಿಜಯಭಾಸ್ಕರ್, ಸಮಾಜ ಕಲ್ಯಾಣಾಧಿಕಾರಿ ದೇವ್ಲಾನಾಯ್ಕ, ಪರಿಶಿಷ್ಟ ಪಂಗಡಗಳ ಅಧಿಕಾರಿ ಶಿವರಾಜ್, ಸರ್ವೆ ಅಧಿಕಾರಿ ಬಾಬುರೆಡ್ಡಿ, ಬಿಸಿಎಂ ಅಧಿಕಾರಿ ರಮೇಶ್, ಶಿರಸ್ತೇದಾರ್ ಸದಾಶಿವಪ್ಪ, ಆರ್. ತಿಪ್ಪೇಸ್ವಾಮಿ, ಡಿ.ಪ್ರಕಾಶ್, ಸುಮಲತಾ, ಸಮಿತಿ ಸದಸ್ಯರಾದ ಯರ್ರಬಾಲಪ್ಪ, ಲಕ್ಷ್ಮಿದೇವಿ, ರಾಜಶೇಖರ್, ಜಿ.ಮಾರಪ್ಪ ಮುಂತಾದವರು ಉಪಸ್ಥಿತರಿದ್ದರು.

# ಹೃದಯ ಶ್ರೀಮಂತಿಕೆ ಇದ್ದವರು ನಿಜವಾದ ಶ್ರೀಮಂತರು: ಶಾಸಕ ಬಿ.ಜಿ.ಗೋವಿಂದಪ್ಪ

» ಹೊಸದುರ್ಗ



ಹಣ ಅಸ್ತಿ ಇದ್ದಂತರವರು ನಿಜವಾದ ಶ್ರೀಮಂತರಲ್ಲ, ಹೃದಯ ಶ್ರೀಮಂತಿಕೆ ಇದ್ದವರು ನಿಜವಾದ ಶ್ರೀಮಂತರು ಎಂದು ಶಾಸಕ ಬಿ.ಜಿ.ಗೋವಿಂದಪ್ಪ ತಿಳಿಸಿದರು.

ತಾಲೂಕಿನ ಅರಳಿಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ತರೀಕೆರೆ ತಾಲೂಕು ಗೊಲ್ಲರಹಳ್ಳಿಯ ಕೊಡುಗೈ ದಾನಿ ಹಾಗೂ ಮಾಜಿ ಕೆ.ಪಿ.ಸಿ.ಸಿ ಸದಸ್ಯ ಎಂ.ರಂಗಪ್ಪ ಅವರು ಉಚಿತವಾಗಿ ಶಾಲೆಗೆ ನೀಡಿದ್ದ ಕಂಪ್ಯೂಟರ್ ಮತ್ತು ಪ್ರಿಂಟರ್‌ಅನ್ನು ಶಾಲೆಯ ಮುಖ್ಯಸ್ಥರಿಗೆ ಹಸ್ತಾಂತರಿಸಿ ಮಾತನಾಡಿದರು.

ಕೆಲವರು ಸಾಕಷ್ಟು ಆಗರ್ಭ ಶ್ರೀಮಂತರಿರುತ್ತಾರೆ ಆದರೆ ಅವರು ಬೇರೆಯವರಿಗಾಗಲಿ ಶಾಲಾ-ಕಾಲೇಜುಗಳಿಗಾಗಲಿ,ಸಂಘ ಸಂಸ್ಥೆಗಳಿಗಾಗಲಿ ದಾನ ಮಾಡುವ ಮನಸ್ಸು ಇರುವುದಿಲ್ಲ, ಅವರಲ್ಲಿ ಹಣದ ಶ್ರೀಮಂತಿಕೆ ಇರುತ್ತದೆಯೋ ಹೊರತು ಹೃದಯ ಶ್ರೀಮಂತಿಕೆ ಇರುವುದಿಲ್ಲ ಎಂಬ ಅಸಮಾಧಾನವನ್ನ ವ್ಯಕ್ತಪಡಿಸಿದ ಅವರು ಬಡವರಿಗೆ, ದೀನ ದಲಿತರಿಗೆ, ನಿರ್ಗತಿಕರಿಗೆ ಸಹಾಯ ಮಾಡುವ ಗುಣ ಇರಬೇಕು ಗಳಿಸಿದ್ದನ್ನ ಅಲ್ಪ ಸ್ವಲ್ಪವಾದರೂ ಸಹಾ ದಾನ ಧರ್ಮಕ್ಕೆಂದು ಮೀಸಲಿಟ್ಟರೆ ಭಗವಂತ ಮೆಚ್ಚುತ್ತಾನೆ ದಾನ ಧರ್ಮ ಮಾಡುವ ವಿಚಾರದಲ್ಲಿ ಮಾಜಿ ಕೆ.ಪಿ.ಸಿ.ಸಿ ಸದಸ್ಯ ಎಂ.ರಂಗಪ್ಪ ಅವರು ಕೊಡುಗೈ ದಾನಿಗಳಾಗಿದ್ದಾರೆ ಎಂದು ಶ್ಲಾಘಿಸಿದರು. ದಾನಿ ಎಂ.ರಂಗಪ್ಪ ಮಾತನಾಡಿ ಇಂದು ದಾನ ಧರ್ಮ ಮಾಡುವವರ ಸಂಖ್ಯೆ ಕಡಿಮೆಯಾಗುತ್ತಿದೆ, ಮನುಷ್ಯನಾದವನು ಬೇರೊಬ್ಬರ ಕಷ್ಟ ಸುಖದಲ್ಲಿ ಭಾಗಿಯಾಗಬೇಕು, ಕೊಡಿಟ್ಟ ಹಣದಲ್ಲಿ ಸ್ವಲ್ಪ ಭಾಗವಾದರೂ ಸಹಾ ಸಮಾಜದ ಒಳತಿಗಾಗಿ ಮೀಸಲಿಡಬೇಕು ಎಂದು ಕರೆ ನೀಡಿದ ಅವರು ಶಿಕ್ಷಕರು ಮಕ್ಕಳಿಗೆ ಉತ್ತಮ ಗುಣ ಮಟ್ಟದ ಬೋಧನೆಯನ್ನ ಮಾಡಿ ಮಕ್ಕಳನ್ನ ಸಮಾಜದ ಮುಖ್ಯ ವಾಹಿನಿಗೆ ತರುವ ಬಹು ದೊಡ್ಡ ಜಬಾಬ್ದಾರಿ ಶಿಕ್ಷಕರ ಮೇಲಿದೆ,ದಾನಿಗಳು ನೀಡುವಂತಹ ಸಾಮಗ್ರಿಗಳನ್ನು ಸರಿಯಾದ ಸದುಪಯೋಗ ಪಡಿಸಿಕೊಂಡು ಸರ್ಕಾರದಿಂದ ಬರುವಂತಹ ಸೌಲಭ್ಯಗಳನ್ನ ಬಳಸಿಕೊಂಡು ಶಾಲೆಯನ್ನ ಪ್ರಗತಿಯನ್ನ ಕಾಣಿರಿ ಎಂದು ಕರೆ ನೀಡಿದ ಅವರು ಈ ಶಾಲೆಗೆ ಸ್ಥಿರ ನಿಧಿ ಇಡಲು 50 ಸಾವಿರ ರೂಗಳನ್ನು ಶಾಲಾ ಮುಖ್ಯಸ್ಥರಿಗೆ ನಗದು ರೂಪದಲ್ಲಿ ನೀಡಿದರು.

## ಮೌಢ್ಯ ದೂರಗೊಳಿಸಲು ಮಾನವ ಬಂಧುತ್ವ ವೇದಿಕೆ ನಿರಂತರ ಜಾಗೃತಿ



» ಚಳ್ಳಕೆರೆ

ಸರ್ಕಾರದ ಲೋಕೋಪಯೋಗಿ ಸಚಿವ ಸತೀಶ್‌ಜಾರಕಿಹೊಳಿ ನೇತೃತ್ವದಲ್ಲಿ ಕಳೆದ ಹಲವಾರು ವರ್ಷಗಳಿಂದ ಮಾನವ ಬಂಧುತ್ವ ವೇದಿಕೆ ಮೌಢ್ಯಗಳಿಂದ ಹೊರಬರುವಂತೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಸಲುವಾಗಿ ಸ್ಮಶಾನದಲ್ಲಿ ಪೂಜಾ ಹಾಗೂ ಸೇವಾ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬಂದಿದ್ದಾರೆ.

ಈ ಬಾರಿ ಚಳ್ಳಕೆರೆ ನಗರದಲ್ಲೂ ಮಾನವಬಂಧುತ್ವ ವೇದಿಕೆ ಕಾರ್ಯಚಟುವಟಿಕೆಗಳಿಗೆ ಚಾಲನೆ ನೀಡಲು ನಗರದ ಕೆಲವು ಯುವಕರು ಯಶಸ್ವಿಯಾಗಿದ್ದಾರೆ. ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರಾದ ಆರ್.ಪ್ರಸನ್ನಕುಮಾರ್, ಎಂ.ಚೇತನ್‌ಕುಮಾರ್, ಬಿ.ಫರೀದ್‌ಖಾನ್, ಡಾ.ರಾಜು, ಪುರಸಭೆ ನಿವೃತ್ತ ನೌಕರ ತಿಪ್ಪೇಸ್ವಾಮಿ ಮುಂತಾದವರು ವಾಲ್ಮೀಕಿ ನಗರದ ಮುಕ್ತಧಾಮದಲ್ಲಿ ಗಿಡನೆಡುವ ಮೂಲಕ ಮೌಢ್ಯಗಳಿಂದ ದೂರವಾಗುವಂತೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಿದರು. ಸಂಚಾಲಕ ಎಂ.ಚೇತನ್‌ಕುಮಾರ್ ಮಾತನಾಡಿ, ಮುಂದಿನ ದಿನಗಳಲ್ಲಿ ಇಂತಹ ಜಾಗೃತಿ ಕಾರ್ಯಕ್ರಮ ಹಂತ, ಹಂತವಾಗಿ ಕೈಗೊಂಡು ಜನರು ಮೌಢ್ಯಗಳಿಂದ ಹೊರಬರುವಂತೆ ಅವರಲ್ಲಿ ವಿಶ್ವಾಸ ತುಂಬಲಾಗುವುದು ಎಂದರು.



**ದೆಹಲಿಯ ಸಂಸತ್ ಭವನದಲ್ಲಿ ಲೋಕಸಭಾ ಸಭಾಪತಿಗಳಾದ ಓಂ ಬಿರ್ಲಾ ರವರ ಹುಟ್ಟು ಹಬ್ಬದ ಪ್ರಯುಕ್ತ ಮಾಜಿ ಕೇಂದ್ರ ಸಚಿವರಾದ ಡಾ.ಜಿ ಎಂ ಸಿದ್ದೇಶ್ವರ ರವರು ಹಾಗೂ ಬಿಜೆಪಿ ಯುವ ಮುಖಂಡರಾದ ಜಿ ಎಸ್ ಅನಿತ್‌ಕುಮಾರ್ ರವರು ಭೇಟಿ ಮಾಡಿ ಹುಟ್ಟು ಹಬ್ಬದ ಶುಭಾಶಯ ಕೋರಿ ಹಲವು ವಿಷಯಗಳ ಬಗ್ಗೆ ಚರ್ಚಿಸಿದರು.ಈ ಸಂದರ್ಭದಲ್ಲಿ ರಾಜೀವ್ ಜಿ.ಎಲ್ ಉಪಸ್ಥಿತರಿದ್ದರು.**




**ದಾವಣಗೆರೆ ನಗರದ ಜಿಲ್ಲಾ ಚಿಗಟೇರಿ ಆಸ್ಪತ್ರೆಯ ಬಳಿ 100 ದಿನಗಳ ಕ್ಷಯಪ್ರಕರಣಗಳನ್ನು ಪತ್ತೆ ಹಚ್ಚುವ ಅಭಿಯಾನದ ನಿಕ್ಷಯ್ ವಾಹನಕ್ಕೆ ಹಸಿರು ನಿಶಾನೆ ತೋರಿಸುವ ಮೂಲಕ ಲೋಕಸಭಾ ಸದಸ್ಯರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರು ಶನಿವಾರ (ಡಿ.7) ರಂದು ಚಾಲನೆ ನೀಡಿದರು.**

## ಪ್ರಮುಖ ಸುದ್ದಿ

# ಕೋಟೆವೀಕ್ಷರಿಗೆ ಮೂಲ ಸೌಲಭ್ಯ ಕಲ್ಪಿಸಿ: ಸತ್ಯಣ್ಣ

» ಚಿತ್ರದುರ್ಗ



ಐತಿಹಾಸಿಕ ಪ್ರಸಿದ್ದ ಪಡೆದಿರುವ ಚಿತ್ರದುರ್ಗದ ಏಳುಸುತ್ತಿನ ಕೋಟೆ ವೀಕ್ಷಣೆಗೆ ದಿನ ದಿನಕ್ಕೂ ಪ್ರವಾಸಿಗರ ಸಂಖ್ಯೆ ಜಾಸ್ತಿಯಾಗುತ್ತಿದೆ. ಆದರೆ ಇಲ್ಲಿಗೆ ಬರುವ ಪ್ರವಾಸಿಗರಿಗೆ ಯಾವುದೇ ಮೂಲಭೂತ ಸೌಲಭ್ಯಗಳಿಲ್ಲವೆಂದು ಕೋಟೆ ವಾಯುವಿಹಾರಿಗಳ ಸಂಘದ ಅಧ್ಯಕ್ಷ ಆರ್.ಸತ್ಯಣ್ಣ ವಿಷಾಧಿಸಿದರು.

ಕೋಟೆ ವಾಯುವಿಹಾರಿಗಳ ಸಂಘ, ಭಾರತೀಯ ಪುರಾತತ್ವ ಮತ್ತು ಪ್ರಾಚ್ಯವಸ್ತು ಇಲಾಖೆ, ಭಾರತೀಯ ಯೋಗ ಶಿಕ್ಷಣ ಸಂಸ್ಥೆ, ಎಸ್.ಜೆ.ಎಂ.ಫಾರ್ಮಸಿ ಕಾಲೇಜು ಎನ್.ಎಸ್.ಎಸ್. ಘಟಕ ಹಾಗೂ ಪರಿಸರ ಪ್ರೇಮಿಗಳ ಒಕ್ಕೂಟದಿಂದ ಕೋಟೆ ಆವರಣದಲ್ಲಿ ಶನಿವಾರ ಹಮ್ಮಿಕೊಳ್ಳಲಾಗಿದ್ದ ಸ್ವಚ್ಚತಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಕಲ್ಲಿನಕೋಟೆ ಈಗ ಗಿಡ ಮರಗಳ ಕೋಟೆಯಾಗಿ ಪರಿಣಮಿಸಿದೆ. ದೊಡ್ಡ ದೊಡ್ಡ ಕಲ್ಲುಗಳ ನಡುವೆ ಮರಗಳ ಬೇರು ನುಸುಳಿರುವುದರಿಂದ ಕೋಟೆಯ ಕಲ್ಲುಗಳು ಸಡಿಲಗೊಳ್ಳುವ ಸಾಧ್ಯತೆಗಳಿವೆ. ಪುರಾತತ್ವ ಇಲಾಖೆಯವರುಇತ್ತಗಮನಹರಿಸಿಕಲ್ಲುಗಳ ನಡುವೆ ಬೆಳೆದಿರುವ ಗಿಡ-ಮರಗಳನ್ನು ಕತ್ತರಿಸಬೇಕು. ಅತಿ ಮುಖ್ಯವಾಗಿ ಕೋಟೆ ವೀಕ್ಷಣೆಗೆ ಬರುವವರಿಗೆ ಶೌಚಾಲಯದ ವ್ಯವಸ್ಥೆಯಾಗಬೇಕೆಂದು ಒತ್ತಾಯಿಸಿದರು.

ಚಿನ್ಮುಲಾದ್ರಿ ಸಾಹಿತ್ಯ ವೇದಿಕೆಯ ಶೋಭ ಮಲ್ಲಿಕಾರ್ಜುನ್ ಮಾತನಾಡಿ ಇತ್ತೀಚಿನ ದಿನಗಳಲ್ಲಿ ಉಸಿರಾಟಕ್ಕೆ ಶುದ್ದವಾದ ಗಾಳಿಯಿಲ್ಲದಂತಾಗಿದೆ. ಹಾಗಾಗಿ ಎಲ್ಲಾ ಕಡೆ ಗಿಡ ಮರಗಳನ್ನು ಹೆಚ್ಚು ಹೆಚ್ಚು ಬೆಳೆಸಿದರೆ ಮುಂದಿನ ಪೀಳಿಗೆಗೆ ಹಸಿರು ವಾತಾವರಣವನ್ನು ಕೊಡುಗೆಯಾಗಿ ನೀಡಿದಂತಾಗುತ್ತದೆ. ಕೋಟೆಗೆ ಬರುವ ಪ್ರವಾಸಿಗರು ಎಲ್ಲೆಂದರಲ್ಲಿ ಪ್ಲಾಸ್ಟಿಕ್ ನೀರಿನ ಬಾಟಲ್, ಕುರುಕಲು ತಿಂಡಿಯ ಕವರ್‌ಗಳನ್ನು ಎಸೆಯಬಾರದು. ಪರಿಸರವನ್ನು ಸ್ವಚ್ಚವಾಗಿಟ್ಟುಕೊಳ್ಳುವ ಜಾಗೃತಿ ಎಲ್ಲರಲ್ಲಿಯೂ ಮೂಡಬೇಕೆಂದು ಹೇಳಿದರು.ಪದವಿಪೂರ್ವ ಶಿಕ್ಷಣ ಇಲಾಖೆಯ ನಿವೃತ್ತ ಉಪ ನಿರ್ದೇಶಕ ಬಿ.ಎನ್.ನಾಗರಾಜ್ ಮಾತನಾಡುತ್ತ ಐತಿಹಾಸಿಕ ಚಿತ್ರದುರ್ಗ ಕೋಟೆ ದೇಶ-ವಿದೇಶಗಳಲ್ಲಿ ಹೆಸರು ಗಳಿಸಿದೆ. ವಿದೇಶಿ ಪ್ರವಾಸಿಗರು ಇಲ್ಲಿಗೆ ಬರುತ್ತಾರೆ. ಕೋಟೆಯನ್ನು ಸ್ವಚ್ಚವಾಗಿಟ್ಟುಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿ. ಕೋವಿಡ್ ಸಂದರ್ಭದಲ್ಲಿ ಶುದ್ದವಾದ ಆಮ್ಲಜನಕ್ಕೆ ಎಷ್ಟು ಮಹತ್ವವಿದೆ ಎನ್ನುವುದು ಎಲ್ಲರಿಗೂ ಗೊತ್ತಾಗಿದೆ. ಆದ್ದರಿಂದ ಪರಿಸರವನ್ನು ಜೋಪಾನವಾಗಿ ಕಾಪಾಡಿದರೆ ಸಕಲ ಜೀವರಾಶಿಗಳಿಗೆ ಉಪಯೋಗವಾಗಲಿದೆ ಎಂದರು.ಪರಿಸರ ಪ್ರೇಮಿ ಮಲ್ಲಿಕಾರ್ಜುನಯ್ಯ ಮಾತನಾಡಿ ಕೋಟೆಯಲ್ಲಿ ನೂರಾರು ಗಿಡಗಳನ್ನು ನೆಟ್ಟು ಬಹುದೂರಗಳಿಂದ ನೀರು ತಂದು ಗಿಡಗಳನ್ನು ಪೋಷಿಸಿದ ಪರಿಣಾಮ ಈಗ ದೊಡ್ಡ ಮರವಾಗಿ ಬೆಳೆದು ನಿಂತಿವೆ. ಇದರಿಂದ ಪರಿಸರಕ್ಕೆ ಅನುಕೂಲವಾಗಿದೆ. ಮುಂದಿನ ಪೀಳಿಗೆಗೆ ಶುದ್ದವಾದ ಗಾಳಿ ಸಿಗಬೇಕಾದರೆ ಸ್ವಚ್ಚತೆ ಹಾಗೂ ಗಿಡ ಮರಗಳನ್ನು ಬೆಳೆಸುವುದು ಅತಿ ಮುಖ್ಯ ಎಂದು ನುಡಿದರು. ಕೋಟೆ ವಾಯುವಿಹಾರಿಗಳ ಸಂಘದ ಗೌರವಾಧ್ಯಕ್ಷ ಕೂಬಾನಾಯ್ಕ, ಮಲ್ಲಿಕಾರ್ಜುನಾಚಾರ್, ಯೋಗ ಶಿಕ್ಷಕ ರವಿ ಅಂಬೇಕರ್, ಮಲ್ಲಿಕಾರ್ಜುನಸ್ವಾಮಿ, ಮುರಿಗೆಮ್ಮ, ಪ್ರೊ.ನಟರಾಜ್, ಸಂದೀಪ್, ಪುರಾತತ್ವ ಇಲಾಖೆಯ ರಾಣಿ, ಇರ್ಫಾನ್, ಲೋಕೇಶ್, ಎನ್.ಎಸ್.ಎಸ್. ವಿದ್ಯಾರ್ಥಿಗಳು ಸ್ವಚ್ಚತಾ ಕಾರ್ಯದಲ್ಲಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಆಕ್ಷೇಪಣೆಗೆ ಅರ್ಜಿ

» ದಾವಣಗೆರೆ

ಸ್ವಚ್ಛ ಭಾರತ ಅಭಿಯಾನದಡಿ 2.0 ಅಡಿಯಲ್ಲಿ ಜಗಳೂರು ಪಟ್ಟಣವನ್ನು ಬಯಲು ಶೌಚಮುಕ್ತ ಪ್ಲಸ್ ಪಟ್ಟಣವೆಂದು ಮತ್ತೊಮ್ಮೆ ಮರು ಪ್ರಮಾಣೀಕರಣವಾಗಿರುತ್ತದೆ. . ಸಾರ್ವಜನಿಕರು ಸಂಘ ಸಂಸ್ಥೆಗಳು ಹಾಗೂ ಸರ್ಕಾರೇತರ ಸಂಸ್ಥೆಗಳು ಈ ಕುರಿತು ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಹಾಗೂ ಎ□□ಬಿಎಂ, ಒಡಿಎಫ್ ಸೇವಾ ಮಟ್ಟದ ಮಾನದಂಡಗಳನ್ನು ಪೂರೈಸಿದ್ದು, ಆಕ್ಷೇಪಣೆಗಳು ಇದ್ದಲ್ಲಿ 3 ದಿನಗಳೊಳಗಾಗಿ ಮುಖ್ಯಾಧಿಕಾರಿ ಪಟ್ಟಣ ಪಂಚಾಯಿತಿ ಜಗಳೂರು ಇಲ್ಲಿಗೆ ಲಿಖಿತ ರೂಪದಲ್ಲಿ ಸಲ್ಲಿಸಬೇಕೆಂದು ಮುಖ್ಯಾಧಿಕಾರಿ ಲೋಕ್ಯಾನಾಯ್ಕ.ಸಿ ತಿಳಿಸಿದ್ದಾರೆ.

### ಮಣ್ಣು ಪರೀಕ್ಷೆ ಮಾಡಿಸಿದರೇ ಮಾತ್ರ ಮಣ್ಣಿನ ಪೋಷಕಾಂಶಗಳ ಬಗ್ಗೆ ಮಾಹಿತಿ ತಿಳಿಯುತ್ತದೆ



» ಹೊಸದುರ್ಗ

ರೈತರು ಮಣ್ಣು ಪರೀಕ್ಷೆ ಮಾಡಿಸಿಕೊಳ್ಳಬೇಕು. ಆಗ ಮಣ್ಣಿನಲ್ಲಿರುವ ಪೋಷಕಾಂಶಗಳ ಬಗ್ಗೆ ಮಾಹಿತಿ ತಿಳಿಯುತ್ತದೆ. ಮಣ್ಣು ಮಾದರಿ ಸಂಗ್ರಹಣೆ ಬಗ್ಗೆ ರೈತರಿಗೆ ಮಾಹಿತಿ ನೀಡಬೇಕು. ಹೆಚ್ಚು ಮಣ್ಣು ಪರೀಕ್ಷೆ ಆಗುವಂತೆ ಸಹಕರಿಸಿ ಎಂದು ಬಬ್ಬೂರು ಕೆ.ವಿ.ಕೆ ವಿಜ್ಞಾನಿ ಮಹಾಂತೇಶ್ ಹೇಳಿದರು.ಕೃಷಿ ಇಲಾಖೆ ಹಾಗೂ ವಿವಿಧ ಇಲಾಖೆಗಳ ವತಿಯಿಂದ ಪಟ್ಟಣದ ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಆವರಣದಲ್ಲಿ ಆಯೋಜಿಸಿದ್ದ ' ವಿಶ್ವ ಮಣ್ಣು ದಿನಾಚರಣೆಯ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಮಣ್ಣು ಜೀವ ಇರುವ ವಸ್ತು ಅದರ ಫಲವತ್ತತೆಯನ್ನು ಕಾಪಾಡಲು ಹಸಿರೆಲೆ ಗೊಬ್ಬರ, ಕೊಟ್ಟಿಗೆ ಗೊಬ್ಬರ, ದ್ವಿದಳ ಧಾನ್ಯ ಬೆಳೆ, ಜೀವಾಮೃತ ಮತ್ತು ಟ್ರೈಕೋಡರ್ಮಾ ಜೈವಿಕ ಗೊಬ್ಬರವನ್ನು ಕೊಟ್ಟಿಗೆ ಗೊಬ್ಬರದ ಜೊತೆ ಬಳಸುವುದರಿಂದ ಮಣ್ಣಿನ ಆರೋಗ್ಯ ಕಾಪಾಡಿಕೊಳ್ಳಬಹುದು ಎಂದು ರೈತರಿಗೆ ಮಾಹಿತಿ ನೀಡಿದರು. ಮಣ್ಣು ನವೀಕರಿಸಲಾಗದ ಸಂಪನ್ಮೂಲ. ಅತಿಯಾದ ರಾಸಾಯನಿಕ ಗೊಬ್ಬರಗಳ ಬಳಕೆಯಿಂದಾಗಿ ಮಣ್ಣು ವಿನಾಶದತ್ತ ಸಾಗುತ್ತಿದೆ. ಆರೋಗ್ಯಯುಕ್ತ ಮಣ್ಣಿನ ಗುಣಧರ್ಮಗಳನ್ನು ನಿರ್ಲಕ್ಷಿಸಿ, ಬೆಳೆ ಅಧಿಕ ಇಳುವರಿ ಪಡೆಯುವುದು ಹಾಗೂ ಲಾಭದ ಮೊರೆ ಹೋಗಿದ್ದೇವೆ. ರಾಸಾಯನಿಕ ಗೊಬ್ಬರ, ಕೀಟನಾಶಕಗಳು, ಕಳೆನಾಶಕಗಳ ಬಳಕೆ ನಿಷೇಧಿಸಬೇಕು.ಸಾವಯವಗೊಬ್ಬರಗಳನ್ನುಹೆಚ್ಚಾಗಿ ಬಳಸಿ, ಮಣ್ಣಿನ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಸಹಾಯಕ ಕೃಷಿ ನಿರ್ದೇಶಕ ಸಿ.ಎಸ್. ಈಶ ಕಿವಿಮಾತು ಹೇಳಿದರು.' ಈ ಸಂಧರ್ಬದಲ್ಲಿ ಕೃಷಿಕ ಸಮಾಜದ ಅಧ್ಯಕ್ಷ ಚಂದ್ರಶೇಖರಪ್ಪ, ಕಾರ್ಯದರ್ಶಿ ಬೋರೇಶ್, ಶಶಿಧರ್, ಕೃಷಿ ವಿವಿ ಪ್ರಾಧ್ಯಾಪಕಿ ಕಲ್ಪನಾ, ವಿಜ್ಞಾನಿ ಗೀತಾ ಸೇರಿದಂತೆ ಆತ್ಮ ಯೋಜನೆಯ ಸಿಬ್ಬಂದಿಗಳು, ಕೃಷಿ ಇಲಾಖೆ ಸಿಬ್ಬಂದಿಗಳು ಸೇರಿದಂತೆ ಹಲವರಿದ್ದರು.

### ನಿರಂತರ ಅಭ್ಯಾಸದಿಂದ ಉತ್ತಮ ಫಲಿತಾಂಶ ಸಾಧ್ಯ

» ಹೊಸದುರ್ಗ

ವಿದ್ಯಾರ್ಥಿಗಳು ನಿರಂತರ ಅಭ್ಯಾಸ ಮಾಡಬೇಕು. ಅಭ್ಯಾಸ ಮಾಡಿದ್ದನ್ನು ಪ್ರತಿದಿನ ಮನನ ಮಾಡಬೇಕು. ಆಗ ಕಲಿಕೆಯಿಂದ ವಿದ್ಯೆ ಶಾಶ್ವತವಾಗಿ ಉಳಿಯುತ್ತದೆ. ಇದರಿಂದ ಉತ್ತಮ ಪರೀಕ್ಷೆ ಪಲಿತಾಂಶ ದೊರೆಯಲು ಸಾಧ್ಯವಿದೆ. ವಿದ್ಯಾರ್ಥಿಗಳು ಕಲಿಯುವ ಸಂದರ್ಭದಲ್ಲಿ ಮೊಬೈಲ್, ಸಾಮಾಜಿಕ ಜಾಲತಾಣಗಳ ಬಗ್ಗೆ ಹೆಚ್ಚು ತಲೆ ಕೆಡಿಸಿಕೊಳ್ಳದೇ ಪುಸ್ತಕವೇ ದೇವರೆಂದು ಅಭ್ಯಾಸ ಮಾಡಬೇಕು ಎಂದು ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಹೊಸದುರ್ಗ ಯೋಜನಾಧಿಕಾರಿ ಎಸ್.ಶಿವಣ್ಣ ತಿಳಿಸಿದರು.ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹೊಸದುರ್ಗ ವತಿಯಿಂದ ಕಲ್ಕೆರೆ ಗ್ರಾಮದಲ್ಲಿ ಆಯೋಜಿಸಿದ್ದ ' ಉಚಿತ ಟ್ಯೂಷನ್ ಕ್ಲಾಸ್ ತರಬೇತಿ'ಯನ್ನು ಉದ್ಘಾಟಿಸಿ ಮಾತನಾಡಿದರು. ತಾಲ್ಲೂಕಿನಲ್ಲಿ 6 ಪ್ರೌಢ ಶಾಲೆ ಮತ್ತು ಪ್ರಾಥಮಿಕ ಶಾಲೆಯಲ್ಲಿ 1 ವಿದ್ಯಾರ್ಥಿ ನಿಲಯದಲ್ಲಿ ವಿಶೇಷ ತರಬೇತಿಯನ್ನು ಬೆಳ್ಳಿಗೆ ಮತ್ತು ಸಂಜೆ ಪ್ರಾರಂಭ ಮಾಡಲಾಗಿದೆ. ಮಕ್ಕಳಿಗೆ ಉಚಿತವಾಗಿ ಟ್ಯೂಷನ್ ಹೇಳಿಕೊಡಲಾಗುತ್ತಿದೆ. ಸಂಬಂಧಪಟ್ಟ ಶಿಕ್ಷಕರ ಗೌರವಧನವನ್ನು ಗ್ರಾಮಾಭಿವೃದ್ಧಿ ಯೋಜನೆ ನೀಡುತ್ತಿದೆ ಎಂದರು. ಬಡಮಕ್ಕಳಿಗಾಗಿ ಧರ್ಮಸ್ಥಳ ವಿರೇಂದ್ರ ಹೆಗ್ಗಡೆಯವರು ಹಿಂದುಳಿದ ಗ್ರಾಮದಲ್ಲಿ ಈ ರೀತಿಯ ವಿಶೇಷ ಟ್ಯೂಷನ್ ಕ್ಲಾಸ್ ಅಭಿಯಾನದ ಮೂಲಕ ಮಕ್ಕಳು ಓದಿನ ಆಸಕ್ತಿ ಹೆಚ್ಚುತ್ತಿರುವುದು ನಮ್ಮೆಲ್ಲರ ಸೌಭಾಗ್ಯ ಎಂದು ಎಸ್.ಡಿ.ಎಂ.ಸಿ. ಅಧ್ಯಕ್ಷ ಉಮೇಶ್ ಹೇಳಿದರು.' ಮುಖ್ಯಶಿಕ್ಷಕ ಪ್ರಶಾಂತ್, ಒಕ್ಕೂಟದ ಅಧ್ಯಕ್ಷ ನವೀನ್ ಕುಮಾರಿ, ಸ್ವಾಮಿ, ತುಕಾರಾಮ್, ಮಮತಾ ಇದ್ದರು.

# ಸ್ಥಳೀಯರಿಗೆ ಉದ್ಯೋಗಕ್ಕಾಗಿ ಆಗ್ರಹಿಸಿ ಧರಣಿ

» ಚಿತ್ರದುರ್ಗ




ಅಕ್ರಮವಾಗಿ ಅದಿರು ಸಾಗಾಟ ಮಾಡುತ್ತಿರುವ ವೇದಾಂತ ಮೈನ್ಸ್ ವಿರುದ್ಧ ವಿವಿಧ ಸಂಘಟನೆಗಳ ಕಾರ್ಯಕರ್ತರು ಭಾನುವಾರದಿಂದ ಧರಣಿ ಸತ್ಯಾಗ್ರಹ ಕುಳಿತಿದ್ದಾರೆ.

ಭೀಮಸಮುದ್ರದ ದಿಂಡದಹಳ್ಳಿ ಸಮೀಪ ಧರಣಿ ಕುಳಿತಿರುವವರು ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ ಫೋಟೋ ಮುಂದಿಟ್ಟುಕೊಂಡು ಸ್ಥಳೀಯರಿಗೆ ಉದ್ಯೋಗ ನೀಡದೆ ಹೊರ ರಾಜ್ಯದವರನ್ನು ಕರೆಸಿಕೊಂಡಿರುವುದರ ವಿರುದ್ಧ ಧಿಕ್ಕಾರಗಳನ್ನು ಕೂಗಿ ನ್ಯಾಯಕ್ಕಾಗಿ ಪಟ್ಟು ಹಿಡಿದರು.

2013ರಲ್ಲಿಅಂದಿನಜಿಲ್ಲಾಧಿಕಾರಿಯಾಗಿದ್ದ ವಿ.ಪಿ.ಇಕ್ಕೇರಿ ವೇದಾಂತ ಗಣಿ ಮೈನ್ಸ್, ಅರಣ್ಯ ಇಲಾಖೆ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳ ಸಭೆ ನಡೆಸಿ 40:60 ಅನುಪಾತದಡಿ ಅದಿರು ಸಾಗಾಣಿಕೆಯಾಗಣಿಕೆ ಮಾಡಬೇಕೆಂದು ಆದೇಶಿಸಿದ್ದರು. ಆದರೆ ವೇದಾಂತ

ಗಣಿ ಮೈನ್ಸನವರು ನಿಯಮಗಳನ್ನು ಮೀರಿ ಸಂಪೂರ್ಣವಾಗಿ ಅದಿರನ್ನು ರೈಲಿನಲ್ಲಿ ಸಾಗಾಗಿಸುತ್ತಿದ್ದಾರೆ. ಇದರಿಂದ ಎರಡು ಸಾವಿರಕ್ಕೂ ಹೆಚ್ಚು ಲಾರಿ ಮಾಲೀಕರು, ಚಾಲಕರುಗಳು ಜೀವನಕ್ಕೆ ದಾರಿ ತೋಚದೆ ಬೀದಿಗೆ ಬಿದ್ದಿದ್ದಾರೆ. ಖಾಸಗಿ ಫೈನಾನ್ಸ್‌ಗಳಲ್ಲಿ ಸಾಲ ಮಾಡಿ ಲಾರಿಗಳನ್ನು ಖರೀಧಿಸಿರುವವರು ಮಾಸಿಕ ಕಂತು ಕಟ್ಟಲು ಆಗದೆ ವಿಷ ಕುಡಿಯುವ ಪರಿಸ್ಥಿತಿಗೆತಲುಪಿದ್ದಾರೆಂದುಧರಣಿನಿರತರು ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಸಾಮಾಜಿಕ ಹೋರಾಟಗಾರ ಭೀಮಸಮುದ್ರದ ಸಿರಾಜ್ ಗೇಟ್-3 ರೋಡ್ ಓಪನ್ ಮಾಡಿ ಲಾರಿಗಳಲ್ಲಿ ಅದಿರು ಸಾಗಾಣಿಕೆಗೆ ಅವಕಾಶ ಕೊಡಬೇಕೆಂದು ಹಲವಾರು ವರ್ಷಗಳಿಂದಲೂ ನಮ್ಮ ಬೇಡಿಕೆಯಿದೆ. ಉಪ ಅರಣ್ಯ ಸಂರಕ್ಷಣಾಧಿಕಾರಿ, ಹೊಳಲ್ಕೆರೆ ವಲಯ ಅರಣ್ಯಾಧಿಕಾರಿ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆಯವರು ವೇದಾಂತ ಮೈನ್ಸ್‌ನೊಂದಿಗೆ ಅಕ್ರಮ ಅದಿರು ಸಾಗಾಣಿಕೆಗೆ ಕೈಜೋಡಿಸಿದ್ದಾರೆ. ಅರಣ್ಯ ಇಲಾಖೆಯ ಪ್ರದೇಶವನ್ನು ಒತ್ತುವರಿ ಮಾಡಿಕೊಂಡಿದ್ದು, ದಿನಕ್ಕೆ 25 ಸಾವಿರ ಟನ್ ಅದಿರು ಸಾಗಾಣಿಕೆಯಾಗುತ್ತಿದೆ. ಒಂದು ದಿನಕ್ಕೆ ಏನಿಲ್ಲವೆಂದರೂ ನೂರು ಕೋಟಿ ರೂ ವಹಿವಾಟು ನಡೆಯುತ್ತಿದೆ ಎಂದು ಆಪಾದಿಸಿದರು.ಲಾರಿಗಳಲ್ಲಿ ಅದಿರು ಸಾಗಾಣಿಕೆ ಮಾಡುವುದನ್ನು ನಿಲ್ಲಿಸಿ ಮೂರು ವರ್ಷಗಳಾಗಿದೆ. ಇದನ್ನೆ ನೆಚ್ಚಿಕೊಂಡಿರುವ ಸಾವಿರಾರು ಕುಟುಂಬಗಳು ಜೀವನಕ್ಕೆ ದಾರಿ ಕಾಣದೆ ಚಿಂತಾಕ್ರಾಂತರಾಗಿದ್ದಾರೆ. ಸ್ಥಳೀಯರನ್ನು ಕಡೆಗಣಿಸಿ ಅನ್ಯ ರಾಜ್ಯದವರನ್ನು ಇಲ್ಲಿಗೆ ಕರೆಸಿಕೊಂಡಿರುವ ವೇದಾಂತ ಗಣಿ ಮೈನ್ಸ್‌ನವರು ರಾತ್ರಿಯಿಡಿ ಅದಿರು ಸಾಗಾಟ ಮಾಡುತ್ತಿರುವುದರಿಂದ ಮಾರ್ಗ ಮಧ್ಯದಲ್ಲಿ ಸಾಕಷ್ಟು ಕಾಡು ಪ್ರಾಣಿಗಳು ಬಲಿಯಾಗುತ್ತಿವೆ. ಜಿಲ್ಲಾಡಳಿತ ಇತ್ತ ಗಮನ ಹರಿಸಿ ಅಕ್ರಮ ಅದಿರು ಸಾಗಾಣಿಕೆಗೆ ಕಡಿವಾಣ ಹಾಕಬೇಕೆಂದು ಮನವಿ ಮಾಡಿದರು.

ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಟಿ.ರಮೇಶ್ ಧರಣಿಯನ್ನುದ್ದೇಶಿಸಿ ಮಾತನಾಡುತ್ತ ಸ್ಥಳೀಯರನ್ನು ನಿರ್ಲಕ್ಷಿಸಿ ಉತ್ತರ ಭಾರತದಿಂದ ಜನರನ್ನು ಕರೆಸಿಕೊಂಡು ಅಕ್ರಮವಾಗಿ ರೈಲಿನ ಮೂಲಕ ವೇದಾಂತ ಗಣಿ ಮೈನ್ಸ್‌ನವರು ಅದಿರು ಸಾಗಾಣಿಕೆ ಮಾಡುತ್ತಿರುವುದನ್ನು ಪ್ರಶ್ನಿಸುವ ಲಾರಿ ಮಾಲೀಕರು, ಚಾಲಕರುಗಳ ಮೇಲೆ ದೌರ್ಜನ್ಯವೆಸಗುತ್ತಿದ್ದಾರೆ. ಇದಕ್ಕೆ ಗಣಿ ಮತ್ತು ಭೂವಿಜ್ಞಾನ ಇಲಾಖೆ ಹಾಗೂ ಅರಣ್ಯ ಇಲಾಖೆಯ ಕುಮ್ಮಕ್ಕಿದೆ. ಗಣಿಗಾರಿಕೆಗೆ ಅರಣ್ಯ ಪ್ರದೇಶವನ್ನು ಒತ್ತುವರಿ ಮಾಡಿಕೊಂಡಿರುವುದರಿಂದ ಗಿಡ-ಮರಗಳ ನಾಶವಾಗುತ್ತಿದೆ. ಇದಕ್ಕೆ ಪರ್ಯಾಯವಾಗಿ ಸಸಿಗಳನ್ನು ಬೆಳೆಸಬೇಕಿತ್ತು. ಇದ್ಯಾವುದರ ಕಡೆ ಗಮನ ಹರಿಸದೆ ವೇದಾಂತ ಮೈನ್ಸ್‌ನವರು ಸರ್ಕಾರದ ನಿಯಮಗಳನ್ನು ಗಾಳಿಗೆ ತೂರಿದ್ದಾರೆ. ಲಾರಿಗಳ ಮೂಲಕ ಅದಿರು ಸಾಗಾಣಿಕೆಗೆ ಅವಕಾಶ ಕೊಡುವತನಕ ಧರಣಿಯಿಂದ ಹಿಂದೆ ಸರಿಯುವುದಿಲ್ಲವೆಂದು ಎಚ್ಚರಿಸಿದರು.

ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ಶ್ರೀರಾಂ, ವೀರಶೈವ ಲಿಂಗಾಯಿತ ಯುವ ವೇದಿಕೆ ಅಧ್ಯಕ್ಷ ಹೆಚ್.ಎಂ.ಮಂಜುನಾಥ್, ಹನೀಸ್, ಸೈಯದ್ ಖುದ್ದೂಸ್, ಲಾರಿ ಮಾಲೀಕರ ಅಸೋಸಿಯೇಷನ್ ಅಧ್ಯಕ್ಷ ಇಮ್ರಾನ್(ಬುಳ್ಳ) ಶಿವರಾಜ್, ವಿಜಯಕುಮಾರ್, ನಾಗರಾಜ್, ವಸೀಂ, ಪ್ರಕಾಶ್ ರಾಮನಾಯ್ಕ ಇನ್ನು ಅನೇಕರು ಧರಣಿಯಲ್ಲಿ ಪಾಲ್ಗೊಂಡಿದ್ದಾರೆ.

# ಕನ್ನಡ ಉಳಿವಿಗೆ ಪ್ರತಿಯೊಬ್ಬರೂಕಂಕಣ ಬದ್ದರಾಗಬೇಕು: ಎಸ್.ಎ.ರವೀಂದ್ರನಾಥ್

» ದಾವಣಗೆರೆ




ಕನ್ನಡ ಉಳಿವಿಗೆ ಪ್ರತಿಯೊಬ್ಬರೂಕಂಕಣ ಬದ್ದರಾಗಬೇಕು, ಇಂದಿನ ಆಧುನಿಕಯುಗದಲ್ಲಿ ತಂದೆ-ತಾಯಿಗಳಿಗೆ ನೀಡುವಗೌರವವನ್ನುಕನ್ನಡ ಭಾಷೆಗೆ ನೀಡಬೇಕು, ನಮ್ಮದು ವೈವಿಧ್ಯ ಮಯ, ಸಾಂಸ್ಕೃತಿಕದೇಶ. ನಮ್ಮ ಸಂಸ್ಕೃತಿಯನ್ನು ಉಳಿಸುವ ಕೆಲಸವನ್ನುಯುವ ಪೀಳಿಗೆಯು ಮಾಡಬೇಕುಎಂದು ಮಾಜಿ ಸಚಿವಎಸ್.ಎ. ರವೀಂದ್ರನಾಥ್ ಹೇಳಿದರು.

ಕರ್ನಾಟರಾಜ್ಯ ಮಾನವ ಹಕ್ಕುಗಳ ಹೋರಾಟ ಸಮಿತಿ ವತಿಯಿಂದನಗರದಎಸ್.ಓ.ಜಿ. ಕಾಲೋನಿಯಲ್ಲಿ 69ನೇ ಕನ್ನಡರಾಜ್ಯೋತ್ಸವದಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ಮಕ್ಕಳು ಪಠ್ಯ, ಪಠ್ಯೇತರ ಚಟುವಟಿಕೆಗಳಲ್ಲಿ ತಮ್ಮನ್ನುತಾವು ತೊಡಗಿಸಿಕೊಂಡು ಬದುಕನ್ನು ರೂಪಿಸಿಕೊಳ್ಳಬೇಕು.ಬಾಳೆ ಗಿಡಕ್ಕೊಂದು ಗೊನೆ ಇರುವಂತೆ ಬಾಳಿಗೊಂದು ಗುರಿಇರಲಿ.ಶಿಸ್ತು, ಸಂಯಮ, ಶ್ರದ್ಧೆ ಮತ್ತು ಪರಿಶ್ರಮಇದ್ದಲ್ಲಿ ಮಾತ್ರಗುರಿ ಸಾಧಿಸಲು ಸಾಧ್ಯಎಂದರು.

ಕರ್ನಾಟರಾಜ್ಯ ಮಾನವ ಹಕ್ಕುಗಳ ಹೋರಾಟ ಸಮಿತಿರಾಜ್ಯ ಪ್ರಧಾನ ಕಾರ್ಯದರ್ಶಿ ಹೆಚ್. ತಿಮ್ಮಣ್ಣ ಮಾತನಾಡಿ, ಪೋಷಕರುತಮ್ಮ ಮಕ್ಕಳು ಕನ್ನಡ ಭಾಷೆಯಲ್ಲಿಕಲಿತರೆ ಭವಿಷ್ಯವಿಲ್ಲ ಎಂಬ ಮನಸ್ಥಿತಿ ಹೊಂದಿರುವುದರಿಂದಇಂದುಕನ್ನಡ ಭಾಷೆಗೆಆತಂಕಎದುರಾಗಿದೆ ಮುಂದಿನ ದಿನಗಳಲ್ಲಿ ಯುವಜನತೆಕನ್ನಡ ಸಾಹಿತ್ಯಗಳನ್ನು ಓದುವ ಮೂಲಕ ಕನ್ನಡದ ಭಾಷೆಯರಕ್ಷಣೆಗೆ ಮುಂದಾಗಬೇಕುಎಂದರು.

ಕರ್ನಾಟರಾಜ್ಯ ಮಾನವ ಹಕ್ಕುಗಳ ಹೋರಾಟ ಸಮಿತಿಅಧ್ಯಕ್ಷ ಬಿ. ಕಲ್ಲೇಶಪ್ಪ ಮಾತನಾಡಿ, ಪ್ರತಿಯೊಬ್ಬರೂಕನ್ನಡ ಭಾಷೆಯನ್ನು ಪ್ರೀತಿಸ'ವಂತಾಗಬೇಕುಕನ್ನಡವನ್ನು ವ್ಯವಹಾರಿಕವಾಗಿ ಬಳಸಿದಾಗ ಮಾತ್ರ ಭಾಷೆಯು ಬೆಳವಣಿಗೆ ಹೊಂದಲು ಸಾಧ್ಯಕನ್ನಡವು ವಿಶ್ವ ಲಿಪಿಯರಾಣಿಯಾಗಿದ್ದು ವಿಜ್ಞಾನ ಭಾಷ'ಯಾಗಿರೂಪುಗೊಂಡಿದೆಕನ್ನಡಿಗರಲ್ಲಿ ಭಾಷೆಯ ಬಗ್ಗೆ ಕ್ರಿಯಾಶೀಲತೆ ಬೆಳೆಸಿಕೊಳ್ಳಬೇಕಿದ್ದು ಕನ್ನಡ ಪರ ಹೋರಾಟಗಳಿಗೆ ಬೆನ್ನೆಲುಬಾಗಿ ನಿಲ್ಲಬೇಕಾಗಿದೆಎಂದರು.

ಕಾರ್ಯಕ್ರಮದಲ್ಲಿದೈಹಿಕ ಶಿಕ್ಷಕ ಸುರೇಶ್, ಸರ್ಕಾರಿ ಶಾಲೆ ಶಿಕ್ಷಕಿ ರೇಣುಕಾ, ಅಶೋಕ್, ಪುಟ್ಟಣ, ಪಾಂಡುರಂಗ, ಗಿರೀಶ್, ತಿಪ್ಪಣ್ಣ, ಶಿವಣ್ಣ, ಪರಶುರಾಮ್, ಬಸಣ್ಣ, ಪರಶುರಾಮ್, ಚನ್ನವೀರಪ್ಪ ಹಾಗೂ ಎಸ್.ಓ.ಜಿ.ಕಾಲೋನಿಯ ನಾಗರೀಕರು ಉಪಸ್ಥಿತರಿದ್ದರು.

ಎಸ್.ಓ.ಜಿ. ಕಾಲೋನಿ ಸರ್ಕಾರಿ ಪ್ರೌಢಶಾಲೆಯ ಮಕ್ಕಳಿಂದ ರಾಷ್ಟ್ರಗೀತೆ, ನಾಡಗೀತೆ ಹಾಡಿ ಗಮನ ಸೆಳೆದರು.

## ವಿಕಲಚೇತನರ ಬಳಿ ಹಣ ವಸೂಲಿ ಮಾಡಿದರೆ ಕಠಿಣ ಕ್ರಮ



» ದಾವಣಗೆರೆ

ವಿಕಲಚೇತನರಿಗೆ ಸರ್ಕಾರಿ ಸೌಲಭ್ಯ ಒದಗಿಸುವ ಸಂದರ್ಭದಲ್ಲಿ ಯಾವುದೇ ಕಾರಣಕ್ಕೂ ಹಣ ವಸೂಲಿ ಮಾಡುವುದು, ಸೌಲಭ್ಯ ತಲುಪಿಸಲು ವಿಳಂಬ ಮಾಡುವುದು ನನ್ನ ಗಮನಕ್ಕೆ ಬಂದರೆ ತಪ್ಪಿತಸ್ಥರ ವಿರುದ್ಧ ಶಿಸ್ತು ಕ್ರಮ ತೆಗೆದುಕೊಳ್ಳಲು ಮೇಲಾಧಿಕಾರಿಗಳಿಗೆ ಸೂಚಿಸುವುದಾಗಿ ಶಾಸಕ ಕೆ.ಎಸ್.ಬಸವಂತಪ್ಪ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ನಗರದ ಹಳೆಯ ಪ್ರವಾಸಿ ಮಂದಿರದಲ್ಲಿ ಭಾನುವಾರ ದೈಹಿಕ ಅಂಗವಿಕಲರಿಗೆ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕಲ್ಯಾಣ ಇಲಾಖೆ ವತಿಯಿಂದ 2023-24ನೇ ಸಾಲಿನ ಮಾಯಕೊಂಡ ಕ್ಷೇತ್ರದ ವ್ಯಾಪ್ತಿಯ 23 ಅರ್ಹ ಫಲಾನುಭವಿಗಳಿಗೆ ತ್ರಿಚಕ್ರ ವಾಹನಗಳನ್ನು ವಿತರಣೆ ಮಾಡಿ ಅವರು ಮಾತನಾಡಿದರು.

ವಿಕಲಚೇತನರಿಗೆ ಪಿಂಚಣಿ, ವೃದ್ಧಾಪ್ಯ ವೇತನ, ತ್ರಿಚಕ್ರ ವಾಹನ, ಸಾಲಸೌಲಭ್ಯ ಸೇರಿದಂತೆ ವಿವಿಧ ಹಲವಾರು ಯೋಜನೆಗಳ ಮೂಲಕ ಸರ್ಕಾರ ಕೋಟ್ಯಂತರ ರೂ. ವ್ಯಯ ಮಾಡುತ್ತದೆ. ಆದರೆ ಅಧಿಕಾರಿಗಳು ಅವರಿಗೆ ಸರ್ಕಾರಿ ಸೌಲಭ್ಯ ಕಲ್ಪಿಸುವ ಮೂಲಕ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರುವ ಕೆಲಸ ಮಾಡುತ್ತಿಲ್ಲ. ಸೌಲಭ್ಯ ಕಲ್ಪಿಸಲು ಫಲಾನುಭವಿಗಳಿಂದ ಹಣ ವಸೂಲಿ ಮಾಡಲಾಗುತ್ತಿದೆ ಎಂಬ ದೂರುಗಳು ಕೇಳಿ ಬರುತ್ತಿವೆ. ಈ ರೀತಿ ಆಗದಂತೆ ಅಧಿಕಾರಿಗಳು ಅವರಿಗೆ ಸೌಲಭ್ಯ ಕಲ್ಪಿಸುವ ಕೆಲಸ ಮಾಡಬೇಕೆಂದು ತಾಕೀತು ಮಾಡಿದರು.

**ಪ್ರಮುಖ ಸುದ್ದಿ**

# ಸರ್ಕಾರಿ ಶಾಲಾ ಮಕ್ಕಳಿಗೂ ಬಂತು ವಿಮಾನಯಾನ ಭಾಗ್ಯ

» ಹೊಸದುರ್ಗ




ಸರ್ಕಾರಿ ಶಾಲೆಗಳೆಂದರೆ ಪ್ರಸ್ತುತ ದಿನ ಮಾನಗಳಲ್ಲಿ ಮೂಗು ಮುರಿಯುವರೇ ಹೆಚ್ಚು ಇಂದಿನ ಪೋಷಕರ ಭಾವನೆ ಬದಲಾಗಿದೆ ಸರ್ಕಾರಿ ಶಾಲೆಗಳಿಗಿಂತ ಖಾಸಗಿ ಶಾಲೆಗಳೆ ಉತ್ತಮ ಎಂಬ ಮನಸ್ಥಿತಿಗೆಬಂದುತಲುಪಿಬಿಟ್ಟಿದ್ದಾರೆ,ಆದರೆ ಇತ್ತೀಚಿನ ವರ್ಷಗಳಲ್ಲಿ ಸರ್ಕಾರ ಸರ್ಕಾರಿ ಶಾಲೆಗಳತ್ತ ಹೆಚ್ಚು ಆಸಕ್ತಿ ತೋರಿಸುತ್ತಿದೆ ಸಾಕಷ್ಟು ಸೌಲಭ್ಯಗಳನ್ನ ಒದಗಿಸುತ್ತಿದೆ ಇಷ್ಟಾದರೂ ಸಹಾ ಸರ್ಕಾರಿ ಶಾಲೆಗೆ ಮಕ್ಕಳನ್ನ ಸೇರಿಸುವಲ್ಲಿ ಸಾಕಷ್ಟು ಪೋಷಕರು ವಿಫಲರಾಗಿದ್ದಾರೆ ಇತ್ತೀಚಿನ ದಿನಮಾಗಳಲ್ಲಿ ಸರ್ಕಾರಿ ಶಿಕ್ಷಕರೂ ಕೂಡ ಜಾಗೃತರಾಗಿದ್ದಾರೆ ಎಂದರೆ ತಪ್ಪಾಗಲಾರದು ಸರ್ಕಾರಿ ಶಾಲೆಗೆ ಮಕ್ಕಳನ್ನ ಕರೆತರುವಲ್ಲಿ ಶಿಕ್ಷಕರ ಪಾತ್ರ ಹಾಗೂ ಶ್ರಮವೂ ಕೂಡ ಸಾಕಷ್ಟಿದೆ ಎಂಬುದನ್ನ ನಾವು ಅಲ್ಲಗಳೆಯುವಂತಿಲ್ಲ.

ಈ ಎಳೆ ವಯಸ್ಸಿನ ಮಕ್ಕಳಿಗೆ ವಿದ್ಯಾರ್ಥಿ ದಿಸೆಯಲ್ಲಿ ಎನೇನೋ ಆಸೆ ಹಂಬಲಗಳು ಕುತೂಹಲಗಳು ಇರುತ್ತವೆ ರೈಲು ನೋಡುವ ಆಸೆ ವಿಮಾನ ನೋಡುವ ಆಸೆ ಎಲಿಕ್ಯಾಪ್ಟರ್ , ಹಡಗು, ನೋಡುವ ಆಸೆ ಜೋತೆಗೆ ಇವೆಲ್ಲವವನ್ನೋ ಒಮ್ಮೆಯಾದರು ಹತ್ತಬೇಕು ಎಂಬುವ ಹಂಬಲ ಅವರಲ್ಲಿ ಮನೆ ಮಾಡುವುದು ಸಹಜ,ಅಂತಹ ಆಸೆಗಳಿಗೆ ಕನಸುಗಳಿಗೆ ಇಲ್ಲೊಂದು ಶಾಲೆ ಮಕ್ಕಳಿಗೆ ವಿಮಾನ ಯಾನ ಮಾಡಿಸುವ ಮೂಲಕ ಮಕ್ಕಳ ಕನಸಿಗೆ ಪುಷ್ಟಿ ನೀಡಿದೆ.

ಹೊಸದುರ್ಗ ಹೊಸದುರ್ಗ ತಾಲ್ಲೂಕಿನ ಮಾರಬಘಟ್ಟ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಗುರುವಾರ ವಿಮಾನಯಾನ ಕೈಗೊಂಡು ಹೊಸದುರ್ಗಕ್ಕೆ ವಾಪಾಸ್ಸಾಗಿದ್ದಾರೆ.

ಸರ್ಕಾರಿ ಶಾಲೆಯಲ್ಲಿನ ಮಕ್ಕಳಿಗೆ ವಿಮಾನಯಾನ ಕಲ್ಪಿಸಲು, ದಾನಿಗಳು, ಶಿಕ್ಷಕರು ಹಾಗೂ ಗ್ರಾಮಸ್ಥರು ಸಹಕಾರ ನೀಡಿದ್ದಾರೆ. ಎಲ್ಲರ ನೆರವು ಪಡೆದು ವಿದ್ಯಾರ್ಥಿಗಳು ವಿಮಾನಯಾನ ಸಂಭ್ರಮಿಸಿದ್ದಾರೆ.

19 ವಿದ್ಯಾರ್ಥಿಗಳು ಹಾಗೂ 3 ಜನ ಶಿಕ್ಷಕರ ತಂಡ ಗುರುವಾರ ಬೆಳಿಗ್ಗೆ ಮಾರಬಘಟ್ಟದಿಂದ ಶಿವಮೊಗ್ಗಕ್ಕೆ ತೆರಳಿದರು. ಅಲ್ಲಿಂದ ಮಧ್ಯಾಹ್ನ ವಿಮಾನದ ಮೂಲಕ ಬೆಂಗಳೂರಿಗೆ ತೆರಳಿದರು. ಬೆಂಗಳೂರಿನಲ್ಲಿ ವಿಧಾನಸೌಧ, ನೆಹರೂ ತಾರಾಲಯ, ವಿಧಾನಸೌಧ ಸೇರಿದಂತೆ ಹಲವು ಸ್ಥಳಗಳನ್ನು ವೀಕ್ಷಿಸಿ ನಂತರ ಶನಿವಾರ ಹೊಸದುರ್ಗಕ್ಕೆ ವಾಪಾಸ್ಸಾದರು.'ಮಾರಬಘಟ್ಟದಂತಹ ಪುಟ್ಟ ಗ್ರಾಮದಲ್ಲಿರುವವರಿಗೆ ವಿಮಾನಯಾನ ಬಹುದೊಡ್ಡ ಕನಸಾಗಿರುತ್ತದೆ. ಮಕ್ಕಳಿಗೂ ಕೂಡ ಇದೊಂದು ಬಹುದೊಡ್ಡ ಅವಕಾಶ. ದಾನಿಗಳು ಹಾಗೂ ಶಿಕ್ಷಕರ ಸಹಕಾರದಿಂದ ಇಂದು ವಿದ್ಯಾರ್ಥಿಗಳಿಗೆ ಉಚಿತ ಪ್ರವಾಸ ಆಯೋಜಿಸಲಾಗಿದೆ. 5 ರಿಂದ 7 ನೇ ತರಗತಿಯವರೆಗೆ 19 ವಿದ್ಯಾರ್ಥಿಗಳು ಪ್ರವಾಸ ಕೈಗೊಂಡಿದ್ದಾರೆ. ಪ್ರವಾಸದ ಒಟ್ಟು ವೆಚ್ಚ □1.9 ಲಕ್ಷ ರೂ ಅಂದಾಜಿಸಲಾಗಿದ್ದು, ದಾನಿಗಳು ಸಹಕಾರ ನೀಡಿದ್ದಾರೆ. ಮಾರಬಘಟ್ಟದ ಪ್ರಭಾಕರ್ ಎಂಬುವವರು ಬೆಂಗಳೂರಿನಲ್ಲಿದ್ದು, ಶಾಲೆಯ ಎಲ್ಲಾ ವಿದ್ಯಾರ್ಥಿಗಳಿಗೂ ಊಟದ ವೆಚ್ಚ ಭರಿಸಿದ್ದಾರೆ. ಬೆಂಗಳೂರಿನ ಬನ್ನೇರುಘಟ್ಟದಲ್ಲಿ ಜಲಸಾರಿಗೆ ಅನುಭವವೂ ಇದೆ. ಮಕ್ಕಳಿಗೆ ಸಾರಿಗೆಗೆ ಬಗ್ಗೆ ಪ್ರತ್ಯಕ್ಷ ಅನುಭವ ನೀಡಲಾಗುವುದು ಎಂದು ಶಿಕ್ಷಕ ಯೋಗರಾಜ್ ತಿಳಿಸಿದರು.' ಮಕ್ಕಳು ಮೊದಲ ಬಾರಿಗೆ ವಿಮಾನಯಾನಕ್ಕೆ ತಯಾರಾಗಿರುವುದನ್ನು ಕಂಡು ಗ್ರಾಮಸ್ಥರು ಸಂತಸ ಪಟ್ಟಿದ್ದಾರೆ. ಎಷ್ಟೋ ಜನರ ಕನಸು ನನಸಾದಂತಾಗಿದೆ.

> ಬಡವರ ಮಕ್ಕಳಿಗೆ ವಿಮಾನಯಾನ ಒಂದು ಕನಸು. ಸ್ಕೌಟ್ಸ್ ಮತ್ತು ಗೈಡ್ಸ್ ಮಕ್ಕಳಿಗೆ ವಿಮಾನಯಾನ ಕಲ್ಪಿಸುವ ಗುರಿಯಿತ್ತು. ಅದೇ ರೀತಿ ಸರ್ಕಾರಿ ಶಾಲೆಗಳಿಗೆ ಮಕ್ಕಳನ್ನು ಸೆಳೆಯುವ ಉದ್ದೇಶದಿಂದ ಈ ಪ್ರವಾಸ ಕೈಗೊಳ್ಳಲಾಗಿದೆ. ಮುಂದಿನ ವರ್ಷ ಹೈದರಾಬಾದ್ ಹೋಗುವ ಉದ್ದೇಶವಿದೆ.
>
> » **ಶಿಕ್ಷಕ (ಆಯೋಜಕ) ಯೋಗರಾಜ್**

> ವಿಮಾನಯಾನ ಚೆನ್ನಾಗಿತ್ತು. ಮರಗಿಡ, ಮನೆಗಳೆಲ್ಲಾ ಚಿಕ್ಕದಾಗಿ ಕಾಣಿಸುತ್ತಿತ್ತು. ಮೊದಲಿಗೆ ಭಯ ಆಯ್ತು, ಆಮೇಲೆ ಸಂತಸ ಹೆಚ್ಚಾಯಿತು. ಆಯಾಸವಿಲ್ಲದ ಪ್ರಯಾಣ ಬಹಳ ಸೊಗಸಾಗಿತ್ತು.
>
> » **ಅರ್ಪಿತಾ 6 ನೇ ತರಗತಿ**


Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T